# ಬೆಳಗಾವಿ ವಾರ್ತೆ

ಕನ್ನಡ ದಿನ ಪತ್ರಿಕೆ, ಬೆಳಗಾವಿ

ಸಂಪಾದಕರು: ಮಹೇಶ್ವರಿ ಭೀಮಶಿ ಭರಮಣ್ಣವರ
EDITOR: MAHESHWARI BHIMASHI BHARAMANNAVARA

BELAGAVI VARTE
KANNADA DAILY MORNING BELAGAVI

G-mail: belagavivarte1@gmail.com
epaper. belagavivarte.com
Regd No : G2/PMG/KA/NK/BM/157/26-28

Volume: 01 | Issue : 106 | WEDNESDAY 01-07-2026 | PRGI No : KNKAN/26/A0962 | Pages:4 | Rs.2.00 | M: 9742418836


## 'ಮತದಾನ ಹಕ್ಕು ಕಳೆದುಕೊಂಡರೆ ಸರ್ಕಾರಿ ಸೌಲಭ್ಯಗಳೂ ಕೈತಪ್ಪಬಹುದು': ಕರ್ನಾಟಕದಲ್ಲಿ ಸಿಎಂ ಮನೆಯಿಂದ SIR ಆರಂಭ



ಬೆಂಗಳೂರಿನಲ್ಲಿ ಸಿಎಂ ಡಿಕೆ ಶಿವಕುಮಾರ್ ಮನೆಯಿಂದಲೇ ಇಂದು ಸಿಬ್ಬಂದಿ ಎಸ್‌ಆರ್‌ಐ ಆರಂಭ ಮಾಡಿದರು. ಇದೇ ವೇಳೆ, 'ಹೇಗೆ ಲಾಗಿನ್ ಮಾಡಬೇಕು ಹೇಳಿ, ಡೌನ್ ಲೋಡ್ ಮಾಡಿ' ಎಂದು ಸಿಎಂ ಸೂಚಿಸಿದರು. 'ನನ್ನ ಫೋನ್‌ನಲ್ಲೇ ಹೇಗೆ ಮಾಡುವುದು ತಿಳಿಸಿಕೊಡಿ' ಎಂದು ಅವರು ಸೂಚಿಸಿದರು.

ಅಧಿಕಾರಿಗಳು ಅವರ ಫೋನ್‌ನಲ್ಲೇ ಆ್ಯಪ್ ಡೌನ್‌ಲೋಡ್ ಮಾಡಿ ತಿಳಿಸಿಕೊಟ್ಟರು. ಫೋನ್‌ನಲ್ಲಿ ಆ್ಯಪ್ ಯೂಸ್ ಮಾಡುವುದು ಸ್ವಲ್ಪ ಜನರಿಗೆ ಗೊತ್ತಾಗಬೇಕು, ಸ್ವಲ್ಪ ಕನ್ಫ್ಯೂಸ್ ಆಗುತ್ತದೆ ಎಂದು ಸಿಎಂ ಹೇಳಿದರು.ಸ್ವತಃ ತಾವೇ ಎಸ್‌ಆರ್‌ಐ ಎನುಮರೇಷನ್ ಫಾರ್ಮ್ ಭರ್ತಿ ಮಾಡಿದರು.

ಕರ್ನಾಟಕದಲ್ಲಿ ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ (SIR)ಇಂದು ಆರಂಭವಾಗಿರುವ ಹಿನ್ನೆಲೆಯಲ್ಲಿ, ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ನಾಗರಿಕರು ತಮ್ಮ ಮತದಾನದ ಹಕ್ಕು ಕಳೆದುಕೊಳ್ಳದಂತೆ ಎಚ್ಚರಿಕೆ ನೀಡಿದ್ದಾರೆ. ಮತದಾರರ ಪಟ್ಟಿಯಲ್ಲಿ ತಮ್ಮ ಹೆಸರು ಇರುವುದನ್ನು ಖಚಿತಪಡಿಸಿಕೊಳ್ಳುವಂತೆ ಕರೆ ನೀಡಿದ ಅವರು, ಮತದಾನದ ಹಕ್ಕು ಕಳೆದುಕೊಂಡರೆ ಸರ್ಕಾರಿ ಸೌಲಭ್ಯಗಳನ್ನೂ ಕಳೆದುಕೊಳ್ಳುವ ಸಾಧ್ಯತೆ ಇದೆ ಎಂದು ಹೇಳಿದರು.

"ಮತದಾನದ ಹಕ್ಕು ಎಂದರೆ ಬದುಕುವ ಹಕ್ಕು. ಪಶ್ಚಿಮ ಬಂಗಾಳದಲ್ಲಿ ಎಸ್‌ಐಆರ್ ಆಧರಿಸಿ ಅರ್ಹರಲ್ಲದ ಪಡಿತರ ಚೀಟಿದಾರರನ್ನು ಪರಿಶೀಲಿಸಿ ಪಟ್ಟಿಯಿಂದ ತೆಗೆದುಹಾಕುವಂತೆ ಆದೇಶಿಸಲಾಗಿದೆ. ಇದೇ ರೀತಿಯ ಕ್ರಮಗಳನ್ನು ಇತರ ರಾಜ್ಯಗಳೂ ಕೈಗೊಳ್ಳುತ್ತಿವೆ. ಮತದಾನದ ಹಕ್ಕು ಕಳೆದುಕೊಂಡರೆ ಸರ್ಕಾರಿ ಸೌಲಭ್ಯಗಳನ್ನೂ ಕಳೆದುಕೊಳ್ಳಬೇಕಾ ಗುತ್ತದೆ," ಎಂದು ಶಿವಕುಮಾರ್ ಹೇಳಿದರು.

ಭಾರತ ಚುನಾವಣಾ ಆಯೋಗವು ರಾಜ್ಯಾದ್ಯಂತ ಮನೆ–ಮನೆಗೆ ತೆರಳಿ ಮತದಾರರ ಗಣತಿ ಕಾರ್ಯವನ್ನು ಮಂಗಳವಾರದಿಂದ ಆರಂಭಿಸಿದ್ದು, ಇದು ಜುಲೈ 29ರವರೆಗೆ ನಡೆಯಲಿದೆ.

ಎಸ್‌ಐಆರ್ ಪ್ರಕ್ರಿಯೆಗೆ ನೆರವಾಗುವ ಉದ್ದೇಶದಿಂದ ರಾಜ್ಯ ಸರ್ಕಾರ ಶಾಶ್ವತ ನಿವಾಸ ಪ್ರಮಾಣಪತ್ರಗಳನ್ನು ನೀಡಲು ತೀರ್ಮಾನಿಸಿದೆ. ಈ ಕುರಿತು ಕಂದಾಯ ಇಲಾಖೆ ಸಮಗ್ರ ಮಾರ್ಗಸೂಚಿಗಳನ್ನು ಪ್ರಕಟಿಸಿದೆ. ನಾಗರಿಕರು ಈ ಪ್ರಮಾಣಪತ್ರವನ್ನು ಆನ್‌ಲೈನ್ ಮತ್ತು ಆಫ್‌ಲೈನ್ ಎರಡೂ ವಿಧಾನಗಳಲ್ಲಿ ಪಡೆಯಬಹುದು.

ಕಂದಾಯ ಇಲಾಖೆ ಪ್ರಕಾರ, ಶಾಶ್ವತ ನಿವಾಸ ಪ್ರಮಾಣಪತ್ರವು ಅಧಿಕೃತ ವಿಳಾಸದ ದಾಖಲೆಯಾಗಿ ಕಾರ್ಯನಿರ್ವಹಿಸುತ್ತದೆ. ನಾಗರಿಕರು ಸೇವಾ ಸಿಂಧು ಪೋರ್ಟಲ್ ಮೂಲಕ ಅಥವಾ ಅಟಲ್ ಜನಸ್ನೇಹಿ ಕೇಂದ್ರಗಳು, ನಾಡಕಚೇರಿಗಳು, ಬೆಂಗಳೂರು ಒನ್, ಕರ್ನಾಟಕ ಒನ್ ಹಾಗೂ ಗ್ರಾಮ ಒನ್ ಕೇಂದ್ರಗಳಲ್ಲಿ ಅರ್ಜಿ ಸಲ್ಲಿಸಿ ಪ್ರಮಾಣಪತ್ರ ಪಡೆಯಬಹುದು.

ಕರ್ನಾಟಕದ ಮುಖ್ಯ ಚುನಾವಣಾಧಿಕಾರಿ ವಿ. ಅನ್ಬುಕ್ಕುಮಾರ್ ಅವರು, ಈ ಪರಿಷ್ಕರಣೆ ಪ್ರಕ್ರಿಯೆಯಲ್ಲಿ ರಾಜ್ಯದ 5.5 ಕೋಟಿಗೂ ಅಧಿಕ ಮತದಾರರನ್ನು ಒಳಗೊಳ್ಳಲಾಗುತ್ತಿದೆ ಎಂದು ತಿಳಿಸಿದ್ದಾರೆ.

## ಚಪ್ಪಲಿ ಎಸೆತ ಪ್ರಕರಣ: ನನ್ನ ಕುಟುಂಬವನ್ನು ಕೀಳಾಗಿ ನಿಂದಿಸಿದರು; ಸಿದ್ದರಾಮಯ್ಯ ಮುಂದೆ ಪ್ರದೀಪ್ ಈಶ್ವರ್ ಕಣ್ಣೀರು!



ಚಿಕ್ಕಬಳ್ಳಾಪುರ: ಚಪ್ಪಲಿ ಎಸೆತ ಪ್ರಕರಣ ಬೆನ್ನಲ್ಲೇ ಚಿಕ್ಕಬಳ್ಳಾಪುರ ಕಾಂಗ್ರೆಸ್ ಶಾಸಕ ಪ್ರದೀಪ್ ಈಶ್ವರ್ ಇಂದು ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಭೇಟಿ ಮಾಡಿ ಕಣ್ಣೀರು ಹಾಕಿದ ಘಟನೆ ನಡೆದಿದೆ.

ಪ್ರದೀಪ್ ಈಶ್ವರ್ ಇಂದು ನನ್ನನ್ನು ಭೇಟಿಮಾಡಿ, ಕೆಂಪೇಗೌಡ ಜಯಂತಿ ಆಚರಣೆಯ ವೇಳೆ ಬಿಜೆಪಿ ಹಾಗೂ ಜೆಡಿಎಸ್ ಕಾರ್ಯಕರ್ತರು ತಮ್ಮ ಮೇಲೆ ಚಪ್ಪಲಿ ಎಸೆದು, ತಮ್ಮ ಕುಟುಂಬದವರನ್ನು ನಿಂದಿಸಿದ್ದು ಸೇರಿದಂತೆ ಅಂದು ನಡೆದ ಎಲ್ಲಾ ಘಟನೆಯನ್ನು ವಿವರಿಸಿ, ತಮ್ಮ ನೋವನ್ನು ಹಂಚಿಕೊಂಡರು. ರಾಜಕಾರಣದಲ್ಲಿ ಇಂಥಹ ಘಟನೆಗಳು ಸಾಮಾನ್ಯವಾಗಿದ್ದು, ಇಲ್ಲೇ ಇದ್ದು ಇಂಥವನ್ನು ಎದುರಿಸಬೇಕು. ಇದರಿಂದ ಧೃತಿಗೆಡಬೇಡಿ, ನಿಮ್ಮೊಂದಿಗೆ ನಾವಿದ್ದೇವೆ ಎಂದು ಸಿದ್ದರಾಮಯ್ಯ ಧೈರ್ಯ ತುಂಬಿದ್ದಾರೆ. ಕಂಟು–ಣುಛಿ

ಗೃಹ ಸಚಿವರಾದ ಪ್ರಿಯಾಂಕ್ ಖರ್ಗೆ ಅವರಿಗೂ ದೂರವಾಣಿ ಕರೆಮಾಡಿ, ಘಟನೆ ಬಗ್ಗೆ ಸೂಕ್ತ ತನಿಖೆ ನಡೆಸುವಂತೆ ಹೇಳಿದ್ದೇನೆ. ಪೋಲೀಸರ ಸಮ್ಮುಖದಲ್ಲೇ ಆಡಳಿತ ಪಕ್ಷದ ಶಾಸಕನಿಗೆ ಈ ರೀತಿ ಆಗಿರುವುದು ಅಕ್ಷಮ್ಯ. ಸಂಬಂಧಪಟ್ಟ ಅಧಿಕಾರಿಯ ವಿರುದ್ಧ ಅಗತ್ಯ ಕ್ರಮ ಜರುಗಿಸಬೇಕು ಎಂದು ತಿಳಿಸಿದ್ದೇನೆ ಎಂದು ಸಿದ್ದರಾಮಯ್ಯ ತಿಳಿಸಿದ್ದಾರೆ.

ಚಿಕ್ಕಬಳ್ಳಾಪುರ ಶಾಸಕರಾದ ಪ್ರದೀಪ್ ಈಶ್ವರ್ ಅವರು ಇಂದು ನನ್ನನ್ನು ಭೇಟಿಮಾಡಿ, ಕೆಂಪೇಗೌಡ ಜಯಂತಿ ಆಚರಣೆಯ ವೇಳೆ ಬಿಜೆಪಿ ಹಾಗೂ ಜೆಡಿಎಸ್ ಕಾರ್ಯಕರ್ತರು ತಮ್ಮ ಮೇಲೆ ಚಪ್ಪಲಿ ಎಸೆದು, ತಮ್ಮ ಕುಟುಂಬದವರನ್ನು ನಿಂದಿಸಿದ್ದು ಸೇರಿದಂತೆ ಅಂದು ನಡೆದ ಎಲ್ಲಾ ಘಟನೆಯನ್ನು ವಿವರಿಸಿ, ತಮ್ಮ ನೋವನ್ನು ಹಂಚಿಕೊಂಡರು.

# "ಮಂಗಳೂರು ಸಮಾಚಾರ"ದಿಂದ ಡಿಜಿಟಲ್ ಯುಗದವರೆಗೆ: ಕನ್ನಡ ಪತ್ರಿಕೋದ್ಯಮದ 183 ವರ್ಷಗಳ ಪಯಣ







"ಸತ್ಯದ ಪರ ನಿಲ್ಲುವ ಧೈರ್ಯ, ಸಮಾಜದ ಪರ ಮಾತನಾಡುವ ಹೊಣೆಗಾರಿಕೆ ಮತ್ತು ಪ್ರಜಾಪ್ರಭುತ್ವವನ್ನು ಸದೃಢಗೊಳಿಸುವ ಶಕ್ತಿ □ ಇವೇ ಪತ್ರಿಕೋದ್ಯಮದ ಜೀವಾಳ." ಸಮಾಜದ ಕಣ್ಣು, ಕಿವಿ ಮತ್ತು ಧ್ವನಿಯಾಗಿ ಕಾರ್ಯನಿರ್ವಹಿಸುವ ಪತ್ರಿಕೋದ್ಯಮಕ್ಕೆ ಗೌರವ ಸಲ್ಲಿಸುವ ದಿನವೇ ಜುಲೈ 1ರ ಪತ್ರಿಕಾ ದಿನಾಚರಣೆ. 1843ರ ಜುಲೈ 1ರಂದು ಕನ್ನಡದ ಮೊದಲ ಪತ್ರಿಕೆ 'ಮಂಗಳೂರು ಸಮಾಚಾರ' ಪ್ರಕಟವಾದ ಸ್ಮರಣಾರ್ಥ ಈ ದಿನವನ್ನು ಕರ್ನಾಟಕದಲ್ಲಿ ಆಚರಿಸಲಾಗುತ್ತಿದೆ.

ಕನ್ನಡ ಪತ್ರಿಕೋದ್ಯಮದ ಇತಿಹಾಸವು ಕೇವಲ ಪತ್ರಿಕೆಗಳ ಬೆಳವಣಿಗೆಯ ಕಥೆಯಲ್ಲ; ಅದು ಕನ್ನಡ ಭಾಷೆಯ ಬೆಳವಣಿಗೆ, ಸಾಮಾಜಿಕ ಸುಧಾರಣೆ, ಸ್ವಾತಂತ್ರ್ಯ ಹೋರಾಟ, ಪ್ರಜಾಪ್ರಭುತ್ವದ ಬಲವರ್ಧನೆ ಮತ್ತು ಜನಜಾಗೃತಿಯ ಸುದೀರ್ಘ ಪಯಣವಾಗಿದೆ.

**ಕನ್ನಡ ಪತ್ರಿಕೋದ್ಯಮದ ಜನ್ಮ :**

19ನೇ ಶತಮಾನದಲ್ಲಿ ಕರ್ನಾಟಕದಲ್ಲಿ ಶಿಕ್ಷಣದ ಪ್ರಮಾಣ ಕಡಿಮೆಯಿತ್ತು. ಸಂವಹನದ ಸೌಲಭ್ಯಗಳು ವಿರಳವಾಗಿದ್ದವು. ಅಂಥ ಸಂದರ್ಭದಲ್ಲಿ ಜರ್ಮನಿಯ ಮಿಷನರಿ ರೆವರೆಂಡ್ ಹರ್ಮನ್ ಫ್ರೆಡ್ರಿಕ್ ಮೊಗ್ಲಿಂಗ್ ಅವರು ಕನ್ನಡ ಭಾಷೆಯ ಮಹತ್ವವನ್ನು ಅರಿತು, ಬಸೇಲ್ ಮಿಷನ್ ಮುದ್ರಣಾಲಯದ ಮೂಲಕ 1843ರ ಜುಲೈ 1ರಂದು "ಮಂಗಳೂರು ಸಮಾಚಾರ" ಪತ್ರಿಕೆಯನ್ನು ಪ್ರಕಟಿಸಿದರು. ಇದು ಕನ್ನಡ ಭಾಷೆಯ ಮೊದಲ ಪತ್ರಿಕೆಯಾಗಿ ಇತಿಹಾಸದಲ್ಲಿ ದಾಖಲಾಗಿದೆ.

ಆರಂಭದಲ್ಲಿ ಈ ಪತ್ರಿಕೆಯಲ್ಲಿ ಸರ್ಕಾರಿ ಪ್ರಕಟಣೆಗಳು, ಸ್ಥಳೀಯ ಘಟನೆಗಳು, ಶಿಕ್ಷಣ, ಕೃಷಿ, ಧಾರ್ಮಿಕ ಹಾಗೂ ಸಾಮಾಜಿಕ ವಿಷಯಗಳು, ದೇಶ–ವಿದೇಶದ ಪ್ರಮುಖ ಸುದ್ದಿಗಳು ಪ್ರಕಟವಾಗುತ್ತಿದ್ದವು. ಕನ್ನಡಿಗರಿಗೆ ಮೊದಲ ಬಾರಿಗೆ ತಮ್ಮದೇ ಭಾಷೆಯಲ್ಲಿ ಸಮಗ್ರ ಸುದ್ದಿಗಳನ್ನು ಓದುವ ಅವಕಾಶ ದೊರಕಿತು. ಇದು ಕನ್ನಡ ಭಾಷೆಯ ಬೆಳವಣಿಗೆಗೂ ಹೊಸ ಆಯಾಮ ನೀಡಿತು.

**ಪತ್ರಿಕೋದ್ಯಮದ ಬೆಳವಣಿಗೆ :** 'ಮಂಗಳೂರು ಸಮಾಚಾರ'ದ ಬಳಿಕ ಕನ್ನಡದಲ್ಲಿ ಅನೇಕ ಪತ್ರಿಕೆಗಳು ಆರಂಭವಾದವು. ಕಾಲಕ್ರಮೇಣ ಪತ್ರಿಕೋದ್ಯಮವು ಸಮಾಜದ ಕನ್ನಡಿಯಾಗಿ ರೂಪುಗೊಂಡಿತು. ಬ್ರಿಟಿಷರ ಆಡಳಿತದ ವಿರುದ್ಧ ಜನರಲ್ಲಿ ಜಾಗೃತಿ ಮೂಡಿಸುವುದು, ಸಾಮಾಜಿಕ ಅನಿಷ್ಟ ಪದ್ಧತಿಗಳ ವಿರುದ್ಧ ಧ್ವನಿ ಎತ್ತುವುದು, ಶಿಕ್ಷಣದ ಮಹತ್ವವನ್ನು ಸಾರುವುದು, ಮಹಿಳಾ ಸಬಲೀಕರಣ ಹಾಗೂ ರೈತರ ಸಮಸ್ಯೆಗಳನ್ನು ಸರ್ಕಾರದ ಗಮನಕ್ಕೆ ತರುವುದು ಪತ್ರಿಕೆಗಳ ಪ್ರಮುಖ ಕಾರ್ಯವಾಯಿತು.

ಸ್ವಾತಂತ್ರ್ಯ ಚಳವಳಿಯ ಸಮಯದಲ್ಲಿ ಪತ್ರಿಕೆಗಳು ದೇಶಭಕ್ತಿಯನ್ನು ಬಿತ್ತುವಲ್ಲಿ ಮಹತ್ತರ ಪಾತ್ರವಹಿಸಿದವು. ಬ್ರಿಟಿಷರ ಕಟ್ಟುನಿಟ್ಟಿನ ಸೆನ್ಸಾರ್ ನಡುವೆಯೂ ಅನೇಕ ಸಂಪಾದಕರು ಮತ್ತು ಪತ್ರಕರ್ತರು ಜನರಲ್ಲಿ ರಾಷ್ಟ್ರೀಯ ಚಿಂತನೆ ಮೂಡಿಸಲು ಶ್ರಮಿಸಿದರು.

ಕರ್ನಾಟಕ ಏಕೀಕರಣ ಚಳವಳಿಯಲ್ಲಿಯೂ ಕನ್ನಡ ಪತ್ರಿಕೆಗಳ ಪಾತ್ರ ಐತಿಹಾಸಿಕವಾಗಿದೆ. ವಿವಿಧ ಭಾಗಗಳಲ್ಲಿ ಚದುರಿಹೋಗಿದ್ದ ಕನ್ನಡಿಗರನ್ನು ಒಂದೇ ಭಾಷೆಯಡಿ ಒಗ್ಗೂಡಿಸುವಲ್ಲಿ ಪತ್ರಿಕೆಗಳು ಸೇತುವೆಯಾಗಿ ಕಾರ್ಯನಿರ್ವಹಿಸಿದವು.

**ಕನ್ನಡ ಪತ್ರಿಕೆಗಳ ಸಾಮಾಜಿಕ ಹೊಣೆಗಾರಿಕೆ :**

ಕನ್ನಡ ಪತ್ರಿಕೆಗಳು ಕೇವಲ ಸುದ್ದಿಗಳನ್ನು ನೀಡುವ ಕೆಲಸ ಮಾಡಲಿಲ್ಲ. ಸಮಾಜದಲ್ಲಿ ನಡೆಯುತ್ತಿದ್ದ ಅನ್ಯಾಯ, ಅಸಮಾನತೆ, ಭ್ರಷ್ಟಾಚಾರ ಮತ್ತು ಶೋಷಣೆಯ ವಿರುದ್ಧ ನಿರಂತರವಾಗಿ ಧ್ವನಿ ಎತ್ತಿದವು. ಶಿಕ್ಷಣ, ಆರೋಗ್ಯ, ಪರಿಸರ, ರೈತರ ಸಮಸ್ಯೆಗಳು, ಮಹಿಳೆಯರ ಹಕ್ಕುಗಳು, ಮಕ್ಕಳ ಕಲ್ಯಾಣ ಹಾಗೂ ಗ್ರಾಮೀಣಾಭಿವೃದ್ಧಿ ಕುರಿತು ಜನಜಾಗೃತಿ ಮೂಡಿಸಿದವು.

ಜನರ ಸಮಸ್ಯೆಗಳನ್ನು ಸರ್ಕಾರದ ಗಮನಕ್ಕೆ ತರುವಲ್ಲಿ ಪತ್ರಿಕೆಗಳು ಪ್ರಮುಖ ಪಾತ್ರವಹಿಸಿವೆ. ಅನೇಕ ಗ್ರಾಮಗಳಿಗೆ ರಸ್ತೆ, ಕುಡಿಯುವ ನೀರು, ಶಾಲೆ, ಆಸ್ಪತ್ರೆ ಸೇರಿದಂತೆ ಮೂಲಸೌಕರ್ಯಗಳು ಪತ್ರಿಕೆಗಳಲ್ಲಿ ಪ್ರಕಟವಾದ ವರದಿಗಳ ನಂತರ ದೊರೆತ ಉದಾಹರಣೆಗಳು ಸಾಕಷ್ಟಿವೆ.

**ಪ್ರಜಾಪ್ರಭುತ್ವದ ನಾಲ್ಕನೇ ಅಂಗ :** ಪತ್ರಿಕೋದ್ಯಮವನ್ನು ಪ್ರಜಾಪ್ರಭುತ್ವದ ನಾಲ್ಕನೇ ಅಂಗ ಎಂದು ಕರೆಯಲಾಗುತ್ತದೆ. ಶಾಸಕಾಂಗ, ಕಾರ್ಯಾಂಗ ಮತ್ತು ನ್ಯಾಯಾಂಗದ ಜೊತೆಗೆ ಪತ್ರಿಕಾರಂಗವೂ ಸರ್ಕಾರದ ಕಾರ್ಯವೈಖರಿಯ ಮೇಲೆ ನಿಗಾ ವಹಿಸುತ್ತದೆ.

ಸರ್ಕಾರದ ಅಭಿವೃದ್ಧಿ ಯೋಜನೆಗಳು ಜನರಿಗೆ ತಲುಪುತ್ತಿವೆ ಯೇ? ಸಾರ್ವಜನಿಕ ಹಣ ಸಮರ್ಪಕವಾಗಿ ಬಳಕೆಯಾಗುತ್ತಿದೆಯೇ? ಭ್ರಷ್ಟಾಚಾರ ನಡೆಯುತ್ತಿದೆಯೇ? ಜನರಿಗೆ ನ್ಯಾಯ ದೊರೆಯುತ್ತಿದೆಯೇ? ಎಂಬ ಪ್ರಶ್ನೆಗಳಿಗೆ ಉತ್ತರ ಹುಡುಕುವ ಜವಾಬ್ದಾರಿ ಪತ್ರಿಕಾರಂಗದ್ದಾಗಿದೆ.

ಸತ್ಯವನ್ನು ಯಾವುದೇ ಒತ್ತಡಕ್ಕೂ ಮಣಿಯದೆ ಜನರ ಮುಂದಿಡುವುದು ಪತ್ರಿಕೋದ್ಯಮದ ನಿಜವಾದ ಧರ್ಮವಾಗಿದೆ.

**ಬದಲಾಗುತ್ತಿರುವ ಪತ್ರಿಕೋದ್ಯಮ :** ಕಳೆದ ಎರಡು ದಶಕಗಳಲ್ಲಿ ಪತ್ರಿಕೋದ್ಯಮದಲ್ಲಿ ದೊಡ್ಡ ಬದಲಾವಣೆ ಕಂಡುಬಂದಿದೆ. ಹಿಂದೆ ಬೆಳಿಗ್ಗೆ ಪತ್ರಿಕೆ ಬಂದ ನಂತರ ಮಾತ್ರ ಸುದ್ದಿ ತಿಳಿಯುತ್ತಿತ್ತು. ಇಂದು ಮೊಬೈಲ್ ಫೋನ್ ಮೂಲಕ ಕೆಲವೇ ಕ್ಷಣಗಳಲ್ಲಿ ಜಗತ್ತಿನ ಯಾವುದೇ ಮೂಲೆಯ ಸುದ್ದಿಯೂ ನಮ್ಮ ಕೈ ಸೇರಿದೆ.

ಮುದ್ರಣ ಪತ್ರಿಕೆಗಳ ಜೊತೆಗೆ ಇ–ಪೇಪರ್, ವೆಬ್ ಪೋರ್ಟಲ್, ಯೂಟ್ಯೂಬ್ ಚಾನೆಲ್, ಡಿಜಿಟಲ್ ನ್ಯೂಸ್ ಪ್ಲಾಟ್‌ಫಾರ್ಮ್ ಹಾಗೂ ಸಾಮಾಜಿಕ ಜಾಲತಾಣಗಳು ಸುದ್ದಿಯ ಪ್ರಮುಖ ಮಾಧ್ಯಮಗಳಾಗಿವೆ.

ಈ ಬದಲಾವಣೆ ಓದುಗರಿಗೆ ಹೆಚ್ಚಿನ ಮಾಹಿತಿ ನೀಡಿದರೂ, ಸುಳ್ಳು ಸುದ್ದಿಗಳ ಹಾವಳಿ, ಅಪೂರ್ಣ ಮಾಹಿತಿ, ಪರಿಶೀಲನೆ ಇಲ್ಲದ ಸುದ್ದಿಗಳ ಪ್ರಸಾರ ಹಾಗೂ ಕ್ಲಿಕ್‌ಬೇಟ್ ಸಂಸ್ಕೃತಿ ಹೊಸ ಸವಾಲುಗಳಾಗಿ ಎದುರಾಗಿವೆ.

**ಇಂದಿನ ಪತ್ರಕರ್ತರ ಮುಂದೆ ಇರುವ ಸವಾಲುಗಳು :** ಇಂದಿನ ಪತ್ರಕರ್ತರು ವೇಗ ಮತ್ತು ನಿಖರತೆಯ ನಡುವೆ ಸಮತೋಲನ ಕಾಯ್ದುಕೊಳ್ಳಬೇಕಾಗಿದೆ. ಸುಳ್ಳು ಸುದ್ದಿಗಳನ್ನು ತಡೆಗಟ್ಟುವುದು, ಮಾಹಿತಿಯನ್ನು ಎರಡು ಅಥವಾ ಮೂರು ಮೂಲಗಳಿಂದ ಪರಿಶೀಲಿಸುವುದು, ಸಾಮಾಜಿಕ ಜಾಲತಾಣಗಳ ಒತ್ತಡದಲ್ಲೂ ನೈತಿಕತೆ ಕಾಪಾಡುವುದು, ಕೃತಕ ಬುದ್ಧಿಮತ್ತೆ (AI) ಯುಗದಲ್ಲೂ ವಿಶ್ವಾಸಾರ್ಹತೆ ಉಳಿಸಿಕೊಳ್ಳುವುದು, ವಾಣಿಜ್ಯ ಒತ್ತಡಗಳ ನಡುವೆಯೂ ಸಾರ್ವಜನಿಕ ಹಿತಾಸಕ್ತಿಗೆ ಆದ್ಯತೆ ನೀಡುವುದು, ಇವು ಇಂದಿನ ಪತ್ರಿಕೋದ್ಯಮದ ಪ್ರಮುಖ ಸವಾಲುಗಳಾಗಿವೆ.

**ಡಿಜಿಟಲ್ ಯುಗದಲ್ಲಿ ಓದುಗರ ಜವಾಬ್ದಾರಿಯೂ ಇದೆ :**ಮಸುದ್ದಿ ಕೇವಲ ಪತ್ರಕರ್ತರ ಹೊಣೆಗಾರಿಕೆ ಮಾತ್ರವಲ್ಲ. ಓದುಗರೂ ಯಾವುದೇ ಸುದ್ದಿಯನ್ನು ಪರಿಶೀಲಿಸದೆ ಹಂಚಿಕೊಳ್ಳಬಾರದು. ಅಧಿಕೃತ ಹಾಗೂ ವಿಶ್ವಾಸಾರ್ಹ ಮಾಧ್ಯಮಗಳಿಂದ ಬಂದ ಮಾಹಿತಿಯನ್ನೇ ನಂಬಬೇಕು. ಸುಳ್ಳು ಸುದ್ದಿಗಳನ್ನು ತಡೆಗಟ್ಟುವಲ್ಲಿ ಸಾರ್ವಜನಿಕರ ಪಾತ್ರವೂ ಅಷ್ಟೇ ಮಹತ್ವದ್ದಾಗಿದೆ.

**ಕರ್ನಾಟಕದಲ್ಲಿ ಪತ್ರಿಕೋದ್ಯಮದ ಭವಿಷ್ಯ :** ಇಂದು ಕನ್ನಡ ಪತ್ರಿಕೋದ್ಯಮ ಜಾಗತಿಕ ಮಟ್ಟದಲ್ಲಿ ತನ್ನ ಪ್ರಭಾವ ವಿಸ್ತರಿಸಿದೆ. ವಿದೇಶಗಳಲ್ಲಿ ನೆಲೆಸಿರುವ ಕನ್ನಡಿಗರೂ ಡಿಜಿಟಲ್ ಮಾಧ್ಯಮಗಳ ಮೂಲಕ ಕನ್ನಡ ಸುದ್ದಿಗಳನ್ನು ಕ್ಷಣಾರ್ಧದಲ್ಲಿ ಓದುತ್ತಿದ್ದಾರೆ.

ಕೃತಕ ಬುದ್ಧಿಮತ್ತೆ, ಡೇಟಾ ಜರ್ನಲಿಸಂ, ಮೊಬೈಲ್ ಜರ್ನಲಿಸಂ ಹಾಗೂ ಮಲ್ಟಿಮೀಡಿಯಾ ವರದಿಗಾರಿಕೆ ಪತ್ರಿಕೋದ್ಯಮದ ಹೊಸ ಅಧ್ಯಾಯಗಳಾಗಿವೆ. ತಂತ್ರಜ್ಞಾನ ಬದಲಾದರೂ ಪತ್ರಿಕೋದ್ಯಮದ ಮೂಲ ತತ್ವಗಳಾದ ಸತ್ಯ, ನಿಖರತೆ, ನಿಷ್ಪಕ್ಷಪಾತತೆ, ವಿಶ್ವಾಸಾರ್ಹತೆ ಮತ್ತು ಸಾರ್ವಜನಿಕ ಹಿತಾಸಕ್ತಿ ಎಂದಿಗೂ ಬದಲಾಗುವುದಿಲ್ಲ.

ಕನ್ನಡ ಪತ್ರಿಕೋದ್ಯಮವು 183 ವರ್ಷಗಳ ಇತಿಹಾಸ ಹೊಂದಿದ್ದು, ಈ ಸುದೀರ್ಘ ಪಯಣದಲ್ಲಿ ಸಮಾಜದ ಅಭಿವೃದ್ಧಿ, ಕನ್ನಡ ಭಾಷೆಯ ಬೆಳವಣಿಗೆ ಮತ್ತು ಪ್ರಜಾಪ್ರಭುತ್ವದ ಬಲವರ್ಧನೆಗೆ ಅನನ್ಯ ಕೊಡುಗೆ ನೀಡಿದೆ. ಪತ್ರಿಕಾ ದಿನಾಚರಣೆ ಕೇವಲ ಸಂಭ್ರಮದ ದಿನವಲ್ಲ; ಪತ್ರಿಕೋದ್ಯಮದ ಮೌಲ್ಯಗಳನ್ನು ನೆನಪಿಸಿಕೊಳ್ಳುವ, ಹೊಣೆಗಾರಿಕೆಯನ್ನು ಮತ್ತಷ್ಟು ಬಲಪಡಿಸಿಕೊಳ್ಳುವ ದಿನವಾಗಿದೆ.

### ಕರ್ನಾಟಕ ಪತ್ರಿಕಾ ದಿನಾಚರಣೆ– ಪ್ರಮುಖ ಮಾಹಿತಿ

**ಆಚರಣೆ ದಿನ:** ಜುಲೈ 1

**ಆಚರಣೆಯ ಉದ್ದೇಶ:** ಕನ್ನಡದ ಮೊದಲ ಪತ್ರಿಕೆ "ಮಂಗಳೂರು ಸಮಾಚಾರ" ಪ್ರಕಟವಾದ ದಿನದ ಸ್ಮರಣೆ.

**ಮೊದಲ ಕನ್ನಡ ಪತ್ರಿಕೆ:** ಮಂಗಳೂರು ಸಮಾಚಾರ

**ಪ್ರಾರಂಭ:** 1843ರ ಜುಲೈ 1

**ಸಂಸ್ಥಾಪಕರು:** ರೆವರೆಂಡ್ ಹರ್ಮನ್ ಫ್ರೆಡ್ರಿಕ್ ಮೊಗ್ಲಿಂಗ್

**ವಿಶೇಷತೆ:** ಕನ್ನಡ ಪತ್ರಿಕೋದ್ಯಮದ ಐತಿಹಾಸಿಕ ಆರಂಭಕ್ಕೆ ನಾಂದಿ ಹಾಡಿದ ಪತ್ರಿಕೆ.

**ರಾಜ್ಯ ಸರ್ಕಾರದ ನಿರ್ಧಾರ:** ಕನ್ನಡದ ಮೊದಲ ಪತ್ರಿಕೆಯ ಗೌರವಾರ್ಥ ಜುಲೈ 1ನ್ನು ಕರ್ನಾಟಕ ಪತ್ರಿಕಾ ದಿನಾಚರಣೆಯಾಗಿ ಆಚರಿಸಲಾಗುತ್ತಿದೆ.

**"ತಂತ್ರಜ್ಞಾನ ಎಷ್ಟೇ ಮುಂದುವರಿದರೂ, ಸತ್ಯವನ್ನು ನಿಷ್ಠೆಯಿಂದ ಹುಡುಕಿ ಜನರ ಮುಂದಿಡುವ ಪತ್ರಿಕೋದ್ಯಮವೇ ಸಮಾಜದ ವಿಶ್ವಾಸವನ್ನು ಉಳಿಸಿಕೊಳ್ಳುತ್ತದೆ. ಪತ್ರಿಕೆಗಳು ಪ್ರಜಾಪ್ರಭುತ್ವದ ಉಸಿರಾಗಿದ್ದು, ಜಾಗೃತ ಸಮಾಜದ ಭದ್ರ ಅಡಿಪಾಯವಾಗಿವೆ."**

# “ಸಹಕಾರ ಸಂಘದ ಸದಸ್ಯರ ಆರೋಗ್ಯ ಜಾಗೃತಿ ಮತ್ತು ಅರಿವು ಮೂಡಿಸುವ ಕಾರ್ಯಕ್ರಮ”

ಗದಗ: ಸಹಕಾರ ಇಲಾಖೆ ಗದಗ, ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ ನಿ., ಬೆಂಗಳೂರು, ಗದಗ ಜಿಲ್ಲಾ ಸಹಕಾರ ಯೂನಿಯನ್ ನಿ., ಗದಗ, ಕೆ.ಸಿ.ಸಿ. ಬ್ಯಾಂಕ್ ಲಿ., ಧಾರವಾಡ ಹಾಗೂ ಧಾರವಾಡ ಹಾಲು ಒಕ್ಕೂಟ, ಗದಗ ಉಪವಿಭಾಗ ಇವರುಗಳ ಸಂಯುಕ್ತ ಆಶ್ರಯದಲ್ಲಿ ಜಿಲ್ಲೆಯಾದ್ಯಂತ “ಕೇಂದ್ರ ಸಹಕಾರ ಸಚಿವಾಲಯ ಪ್ರಾರಂಭಗೊಂಡು ಐದು(5) ವರ್ಷ ಪೂರ್ಣಗೊಳ್ಳುತ್ತಿರುವ ಸುಸಂದರ್ಭ”ದಲ್ಲಿ 30.06.2026, ಮಂಗಳವಾರ, ರಂದು ಬೆಳ್ಳಿಗ್ಗೆ 11.00 ಗಂಟೆಗೆ ಟಿ.ಎ.ಪಿ.ಸಿ.ಎಂ.ಎಸ್.ಲಿ., ಲಕ್ಷ್ಮೇಶ್ವರ ತಾ.ಲಕ್ಷ್ಮೇಶ್ವರ ಜಿ.ಗದಗ ಇದರ ಸಭಾಭವನದಲ್ಲಿ “ಸಹಕಾರ ಸಂಘದ ಸದಸ್ಯರ ಆರೋಗ್ಯ ಜಾಗೃತಿ ಮತ್ತು ಅರಿವು ಮೂಡಿಸುವ ಕಾರ್ಯಕ್ರಮ” ಜರುಗಿಸಲಾಯಿತು.



ಕಾರ್ಯಕ್ರಮವನ್ನು ಕೆ.ಸಿ.ಸಿ. ಬ್ಯಾಂಕ್ ಲಿ., ಧಾರವಾಡ ನಿರ್ದೇಶಕರಾದ ಶ್ರೀ ಜಿ. ವ್ಹಿ. ಪಾಟೀಲರವರು ಉದ್ಘಾಟಿಸಿ ಮಾತನಾಡುತ್ತಾ ಸಹಕಾರ ಸಂಘಗಳ ಮೂಲಕ ಉದ್ಯೋಗ, ಆದಾಯ ಮತ್ತು ಸ್ವಾವಲಂಬನೆ ಹೆಚ್ಚಿಸುವುದು, ಸಹಕಾರ ಸಂಘಗಳಲ್ಲಿ ಪಾರದರ್ಶಕತೆ ಡಿಜಿಟಲೀಕರಣ ಮತ್ತು ಉತ್ತಮ ಆಡಳಿ ನೀಡುವುದು, ಜನ ಜಾಗೃತಿ ಮೂಡಿಸುವುದು ಗ್ರಾಮಸಭೆ, ರೈತಸಭೆ ಮತ್ತು ಮಹಿಳಾ ಸ್ವಸಹಾಯ ಸಂಘಗಳ ಸಭೆಗಳಲ್ಲಿ ಸಹಕಾರದ ಬಗ್ಗೆ ಅರಿವು ಮೂಡಿಸುವುದು, ಶಾಲಾ ಕಾಲೇಜ್ ಹಾಗೂ ಯುವಜನ ಸಂಘಗಳಲ್ಲಿ ಸಹಕಾರದ ಮಹತ್ವದ ಕುರಿತು ಉಪನ್ಯಾಸ ಮತ್ತು ಕಾರ್ಯಾಗಾರಗಳನ್ನು ಆಯೋಜಿಸುವುದು ಸಾಮಾಜಿಕ ಜಾಲತಾಣಗಳನ್ನು, ವಾಟ್ಸಾಪ್, ಸ್ಥಳಿಯ ಟಿವಿ ಹಾಗೂ ರೇಡಿಯೋ ಮೂಲಕ ಮಾಹಿತಿ ಪ್ರಸಾರ ಮಾಡುವುದು, ಯಶಸ್ವಿಯಾದ ಸಹಕಾರ ಸಂಘಗಳ ಉದಾಹರಣೆಗಳನ್ನು ಜನರಿಗೆ ಪರಿಚಯಿಸುವುದು, ಸಹಕಾರದಿನ ಹಾಗೂ ವಿಶೇಷ ಜಾಗೃತಿ ಅಭಿಯಾನಗಳನ್ನು ಹಮ್ಮಿಕೊಳ್ಳುವುದು ಕರಪತ್ರ, ಪೋಸ್ಟರ್ ಬ್ಯಾನರ್ ಹಾಗೂ ಸ್ಥಳೀಯ ಭಾಷೆಯ ಮಾಹಿತಿ ಪುಸ್ತಕಗಳನ್ನು ವಿತರಿಸುವುದು, ಹೊಸ ಸಹಕಾರ ಸಂಘ ಪ್ರಾರಂಭಿಸುವ ವಿಧಾನ ಸದಸ್ಯತ್ವದ ಪ್ರಯೋಜನೆಗಳು ಹಾಗೂ ಸರ್ಕಾರದ ಯೋಜನೆಗಳನ್ನು ಸರಳವಾಗಿ ತಿಳಿಸುವುದರ ಮೂಲಕ ಸಹಕಾರ ಸಂಘಗಳ ಏಳ್ಗೆಗೆ ಶ್ರಮಿಸಬೇಕು ಎಂದು ಹೇಳಿದರು.

ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘ ನಿ., ಲಕ್ಷ್ಮೇಶ್ವರ ಇದರ ಅಧ್ಯಕ್ಷರಾದ ಶ್ರೀ ವಿಜಯಕುಮಾರ ಮಕ್ಕಿ ಮಾತನಾಡುತ್ತಾ ಸಹಕಾರ ಕ್ಷೇತ್ರವನ್ನು ಬಲಪಡಿಸುವುದು, ಮಹಿಳೆಯರು ಮತ್ತು ಗ್ರಾಮೀಣ ಜನರಿಗೆ ಆರ್ಥಿಕ ಶಕ್ತಿ ನೀಡುವುದು, ಐದು ವರ್ಷಗಳಲ್ಲಿ ಪ್ರಮುಖ ಸಾಧನೆಗಳು ದೇಶಾದ್ಯಂತ 33,853 ಕ್ಕೂ ಹೆಚ್ಚು ಹೊಸ ಬಹು ಉದ್ದೇಶ ಪಿ.ಎ.ಸಿ.ಎಸ್, 21,292 ಕ್ಕೂ ಹೆಚ್ಚು ಡೈರಿ ಹಾಗೂ ಮೀನುಗಾರಿಕೆ ಸಹಕಾರ ಸಂಘಗಳನ್ನು ಬಲಪಡಿಸಿ ಸಹಕಾರ ಕ್ಷೇತ್ರವನ್ನು ಉನ್ನತೀಕರಣಕ್ಕೆ ತರಲು ಕೇಂದ್ರ ಸರ್ಕಾರವು ಒತ್ತು ನೀಡಿದೆ ಎಂದು ಹೇಳಿದರು.

ಮಾನಿನಿ ವಿವಿದೋದ್ದೇಶಗಳ ಸಹಕಾರ ಸಂಘ ನಿ., ಲಕ್ಷ್ಮೇಶ್ವರ ಇದರ ಮುಖ್ಯ ಕಾರ್ಯನಿರ್ವಾಹಕಿಯರಾದ ಶ್ರೀಮತಿ ನೀಲಾ ಪ್ರ. ಬೊಮ್ಮನಹಳ್ಳಿಯವರು ತಮ್ಮ ಸಂಘದ ಪ್ರಗತಿಯ ಕುರಿತು ಮಾತನಾಡುತ್ತಾ ಗ್ರಾಮ ಪಂಚಾಯತ ಕೃಷಿ ಇಲಾಖೆ, ಹಾಲು ಒಕ್ಕೂಟಗಳು ಮತ್ತು ಸಹಕಾರ ಇಲಾಖೆಗಳ ಸಹಯೋಗದಲ್ಲಿ ಜಾಗೃತಿ ಕಾರ್ಯಕ್ರಮಗಳನ್ನು ನಡೆಸುವುದು ಸಹಕಾರವು ಕೇವಲ ಒಂದು ಸಂಘವಲ್ಲ ಅದು ಜನರ ಭಾಗವಹಿಸುವುಕೆಯ ಮೂಲಕ ಆರ್ಥಿಕ ಸ್ವಾವಲಂಬನೆ ಮತ್ತು ಸಮೃದ್ಧಿಯನ್ನು ಸಾಧಿಸುವ ಜನಾಂದೋಲನೆಯಾಗಿದೆ ಎಂದು ಹೇಳಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಟಿ.ಎ.ಪಿ.ಸಿ.ಎಂ.ಎಸ್ ಲಕ್ಷ್ಮೇಶ್ವರ ಇದರ ಅಧ್ಯಕ್ಷರಾದ ಶ್ರೀ ಸೋಮೇಶ ಜಗದೀಶ ಉಪನಾಳ ಇವರು ವಹಿಸಿ ಮಾತನಾಡುತ್ತಾ ನಾವು ಮುಂದಿನ ದಿನಗಳಲ್ಲಿ ಸಂತೋಷವಾಗಿ ಇರಬೇಕಾದರೆ ನಮ್ಮ ಆರೋಗ್ಯದ ಕಡೆ ಗಮನವಹಿಸುವುದು ಅತ್ಯವಶಕ ಇಂದಿನ ಉಚಿತ ಈ ಆರೋಗ್ಯ ತಪಾಸಣೆ ಶಿಬಿರದಲ್ಲಿ ಸದಸ್ಯರು ಆರೋಗ್ಯದಿಂದ ಇರಲು ಅನುಕೂಲವಾಗುವಂತೆ ಕಾರ್ಯಕ್ರಮವನ್ನು ಜರುಗಿಸಲಾಗಿದೆ. ಇದರ ಸದುಪಯೋಗ ಪಡೆದುಕೊಳ್ಳಬೇಕು ಪ್ರತಿ ಒಂದು ಕುಟುಂಬದಲ್ಲಿ ಒಬ್ಬರು ಸಹಕಾರ ಸಂಘದ ಸದಸ್ಯರಿದ್ದಲ್ಲಿ ಅವರ ಕುಟುಂಬದ ಎಲ್ಲಾ ಸದಸ್ಯರಿಗೆ ಅತೀ ಕಡಿಮೆ ಮೊತ್ತದಲ್ಲಿ ಯಶಸ್ವಿನಿ ಯೋಜನೆಯನ್ನು ಪಡೆದುಕೊಳ್ಳಲು ಅನುಕೂಲವಾಗುತ್ತದೆ ಆದ್ದರಿಂದ ಸಹಕಾರ ಸಂಘಗಳಲ್ಲಿ ಜನರು ಹೆಚ್ಚು ಹೆಚ್ಚು ಸದಸ್ಯತ್ವ ಪಡೆಯುವುದು ಬಹಳ ಮುಖ್ಯ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಹಿರಿಯ ಸಹಕಾರಿಗಳಾದ ಶ್ರೀ ಗದಿಗೆಪ್ಪ ಯತ್ನಳ್ಳಿ, ಟಿ.ಎ.ಪಿ.ಸಿ.ಎಂ.ಎಸ್. ಲಕ್ಷ್ಮೇಶ್ವರ ಉಪಾಧ್ಯಕ್ಷರಾದ ಶ್ರೀ ಶೇಖಣ್ಣ ಮಲ್ಲಪ್ಪ ಕಾಳೆ, ಲಕ್ಷ್ಮೇಶ್ವರ ತಾಲೂಕಿನ ಸಹಕಾರ ಅಭಿವೃದ್ಧಿ ಅಧಿಕಾರಿಗಳಾದ ಶ್ರೀ ಕೆ. ಸಿ. ಕೂಸನೂರಮಠ ಸಹಕಾರ ಸಂಘಗಳ ನಿರೀಕ್ಷಕಿಯರಾದ ಶ್ರೀಮತಿ ಶಾಂತ ಎಚ್.ಎಂ. ಉಪಸ್ಥಿತರಿದ್ದರು.

ಸಹಕಾರ ಸಪ್ತಾಹದ ಎರಡನೇ ದಿನದ ವಿಷಯ “ಸಹಕಾರ ಸಂಘದ ಸದಸ್ಯರ ಆರೋಗ್ಯ ಜಾಗೃತಿ ಮತ್ತು ಅರಿವು” ಕುರಿತು ಡಾ. ಪ್ರಿಯಾಂಕ ಸಂಗನಗೌಡರ, ಅರವಳಿಕೆ ತಜ್ಞರು, ಲಕ್ಷ್ಮೇಶ್ವರ ಇವರು ಉಪನ್ಯಾಸ ನೀಡಿದರು ಹಾಗೂ ತಮ್ಮ ಆರೋಗ್ಯ ಇಲಖೆಯಿಂದ ತಪಾಸಣೆಗೆ ಸಂಬಂಧಿಸಿದ ಸಲಕರಣೆಗಳೊಂದಿಗೆ ಆಗಮಿಸಿ ಸಭೆಯಲ್ಲಿ ಹಾಜರಿದ್ದ ಎಲ್ಲಾ ಪ್ರತಿನಿಧಿಗಳಿಗೆ ಆರೋಗ್ಯ ತಪಾಸಣೆ ಜರುಗಿಸಲಾಯಿತು.

ಮೂದಲಿಗೆ ರಾಣಿ ಚನ್ನಮ್ಮ ಮಾನಿನಿ ವಿವಿದೋದ್ದೇಶ ಸಹಕಾರ ಸಂಘ ನಿ., ಲಕ್ಷ್ಮೇಶ್ವರ ಇದರ ಸಿಬ್ಬಂದಿಯಾದ ಶ್ರೀಮತಿ ಚಂಡ್ರಮ್ಮ ಹಿರೇಮಠ ಹಾಗೂ ಸಂಗಡಿಗರು ಪ್ರಾರ್ಥನೆ ಸಲ್ಲಿಸಿದರು. ಯೂನಿಯನ್ನಿನ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಶ್ರೀ ಚಂದ್ರಶೇಖರ ಎಸ್. ಕರಿಯಪ್ಪನವರ ಸ್ವಾಗತಿಸಿ ನಿರೂಪಿಸಿದರು. ಶ್ರೀಮತಿ ರಶೀದಾಆನು ಸಿ. ಯಲಿಗಾರ ಮಹಿಳಾ ಸಹಕಾರ ಶಿಕ್ಷಕಿಯವರು ವಂದಿಸಿದರು

# ಸಂಭ್ರಮದ ಕಾರಹುಣ್ಣಿಮೆ



ಲಕ್ಷೇಶ್ವರ: ಮುಂಗಾರು ಪ್ರಾರಂಭದ ರೈತರ ಮೊದಲ ಹಬ್ಬ ಕಾರಹುಣ್ಣಿಮೆಯನ್ನು ರೈತ ಸಮುದಾಯ ಸೋಮವಾರ ಪಟ್ಟಣ ಸೇರಿ ಗ್ರಾಮೀಣ ಪ್ರದೇಶಗಳಲ್ಲಿ ವಿಜೃಂಭಣೆಯಿಂದ ಆಚರಿಸಲಾಯಿತು. ಸಂಪ್ರದಾಯದಂತೆ ಹುಲಗೇರಿಬಣದಲ್ಲಿ ಪಾಟೀಲಕುಲಕರ್ಣಿ ಮನೆತನದವರು ನಂದೆಣ್ಣವರ ಕುಟುಂಬದವರಿಗೆ ಕರಿ ಕಟ್ಟಲು ಕೊಡುವರು, ಸೊಪ್ಪಿನಕೇರಿ ಓಣಿಯ ಹಿರಿಯರು ಕರಿ ಹರಿಯುವ ಹಬ್ಬಕ್ಕೆ ಚಾಲನೆ ನೀಡುವ ಸಂಪ್ರದಾಯ ನೆರವೇರಿಸಿದರು.

ಗೋಧೂಳಿ ಸಮಯದಲ್ಲಿ ವಿಶೇಷವಾಗಿ ಅಲಂಕಾರ ಮಾಡಿದ ಎತ್ತು, ಹೋರಿಗಳನ್ನು ರೈತರು ಊರ ಅಗಸಿ ರಸ್ತೆಯಲ್ಲಿ ಓಡಿಸುತ್ತಾ ಅದರ ಹಿಂದೆ ತಾವೂ ಓಡಿ ಸಂತಸ ಪಟ್ಟರು.


ಪಟ್ಟಣದ ಆರಾಧ್ಯದೈವ ಸೋಮೇಶ್ವರನ ಸನ್ನಿಧಿಯಲ್ಲಿ ಗಿರೀಶ ಅಣ್ಣಿಗೇರಿಯವರ ಎತ್ತುಗಳು ಕರಿ ಹರಿದವು. ಎತ್ತುಗಳನ್ನು ಓಡಿಸುವ ದೃಶ್ಯವನ್ನು ಕಣ್ತುಂಬಿಕೊಳ್ಳಲು ಸಾವಿರಾರು ಸಂಖ್ಯೆಯಲ್ಲಿ ರೈತರು, ಯುವಕರು, ಮಕ್ಕಳು ಸೇರಿದ್ದರು. ಕರಿ ಹರಿದ ಎತ್ತುಗಳ ಜತೆ ನೂರಾರು ಎತ್ತುಗಳನ್ನು ಸೇರಿಸಿ ಸಂಜೆ ಪಟ್ಟಣದ ಪ್ರಮುಖ ಬೀದಿಗಳಲ್ಲಿ ಸಕಲ ವಾದ್ಯವೈಭವದೊಂದಿಗೆ ಮೆರವಣಿಗೆ ಮಾಡಲಾಯಿತು. ಈ ವೇಳೆ ಮಳೆರಾಯನ ಆಗಮನ ಹಬ್ಬದ ಸಂಭ್ರಮವನ್ನು ಇಮ್ಮಡಿಗೊಳಿಸಿತು.

ಈ ಸಂದರ್ಭದಲ್ಲಿ ಗುರುರಾಜ ಪಾಟೀಲಕುಲಕರ್ಣಿ, ಚನ್ನಪ್ಪ ಜಗಲಿ, ಶಿವಯೋಗಿ ಅಂಕಲಕೋಟಿ, ಚಂದ್ರಣ್ಣ ಮೆಕ್ಕಿ, ಚನ್ನಪ್ಪ ಚಿಂಚಲಿ, ಬಸವರಾಜ ಮೆಣಸಿನಕಾಯಿ, ವಿರುಪಾಕ್ಷ ಆದಿ, ಅಪ್ಪಣ್ಣ ಮುಳಗುಂದ, ಮಯೂರಗೌಡ ಪಾಟೀಲ, ನಂದೀಶ ಬಂಡಿವಾಡ, ರಾಮಣ್ಣ ಗೌರಿ, ಸೋಮಣ್ಣ ಸುತಾರ, ಸುರೇಶ ಚೌಕನವರ, ಸೋಮಣ್ಣ ಉಮಚಗಿ, ಸುರೇಶ ರಾಚನಾಯ್ಕರ, ಮುತ್ತಣ್ಣ ಕಟ್ಟಿಗೌಡ್ರ , ಗಂಗಪ್ಪ ಮೇವುಂಡಿ, ಈರಪ್ಪ ಗುಡಗೇರಿ, ಬಸವರಾಜ ಅಣ್ಣಿಗೇರಿ, ಬಸವರಾಜ ಆದಿ, ರಮೇಶ ಹೆಬ್ಬಾಳ ಸೇರಿ ರೈತ ಮುಖಂಡರಿದ್ದರು.



ನವಲಗುಂದ: ಅಂತರರಾಷ್ಟ್ರೀಯ ಮಾದಕ ದ್ರವ್ಯ ದುರ್ಬಳಕೆ ಮತ್ತು ಅಕ್ರಮ ಸಾಗಣೆ ವಿರೋಧಿ ದಿನಾಚರಣೆಯ ಅಂಗವಾಗಿ ವಿವಿಧ ಇಲಾಖೆಗಳ ಸಹಯೋಗ ದೊಂದಿಗೆ ಪ್ರಮುಖ ಬೀದಿಗಳಲ್ಲಿ ಜಾಗೃತಿ ಜಾಥಾ ಜರುಗಿತು. ತಹಸೀಲ್ದಾರ ಸುಧೀರ್ ಸಾಹುಕಾರ್, ಸಿಪಿಐ ರವಿಕುಮಾರ ಕಪ್ಪತ್ತನವರ, ಪಿಎಸ್ಐ ಜನಾರ್ಧನ್ ಭಟ್ರಳ್ಳಿ, ಪುರಸಭೆ ಮುಖ್ಯಾಧಿಕಾರಿ ಎಸ್ ಪಿ ಪೂಜಾರ್ ಸೇರಿದಂತೆ ಇತರರು ಇದ್ದರು.

# ಶೈಕ್ಷಣಿಕ ವರ್ಷ ಆರಂಭವಾದರೂ ಇನ್ನೂ ಸಿಗದ PU ಪಠ್ಯಪುಸ್ತಕ: ಶಿಕ್ಷಣ ಇಲಾಖೆ ವಿರುದ್ಧ ವಿದ್ಯಾರ್ಥಿಗಳ ಆಕ್ರೋಶ



ಬೆಂಗಳೂರು: ರಾಜ್ಯ ಸರ್ಕಾರ ಮೇ ಅಂತ್ಯದೊಳಗೆ ಉಚಿತ ಪಠ್ಯಪುಸ್ತಕಗಳನ್ನು ವಿತರಿಸುವುದಾಗಿ ಘೋಷಿಸಿದ್ದರೂ, ಕರ್ನಾಟಕದ ಸರ್ಕಾರಿ ಪದವಿಪೂರ್ವ ಕಾಲೇಜುಗಳ (ಪಿಯುಸಿ) ಸಾವಿರಾರು ವಿದ್ಯಾರ್ಥಿಗಳಿಗೆ ಇನ್ನೂ ಪುಸ್ತಕಗಳು ಲಭ್ಯವಾಗಿಲ್ಲ.

ಇದರಿಂದ ಶೈಕ್ಷಣಿಕ ವರ್ಷ ಆರಂಭವಾಗಿ ಹಲವು ವಾರಗಳು ಕಳೆದರೂ ವಿದ್ಯಾರ್ಥಿಗಳು ಪಾಠ ಕಲಿಯಲು ಸಮಸ್ಯೆ ಅನುಭವಿಸುತ್ತಿದ್ದಾರೆ.

ರಾಜ್ಯ ಸರ್ಕಾರ ಇದೂವರೆಗೆ ಒಂದರಿಂದ ಹತ್ತನೇ ತರಗತಿಯವರೆಗೆ ಮಾತ್ರ ಉಚಿತ ಪಠ್ಯಪುಸ್ತಕಗಳನ್ನು ವಿತರಿಸಿದೆ. ಆದರೆ, ಪಿಯುಸಿ ವಿದ್ಯಾರ್ಥಿಗಳಿಗೆ ಪುಸ್ತಕಗಳ ವಿತರಣೆ ವಿಳಂಬವಾಗಿದೆ.

ಅಖಿಲ ಭಾರತ ಪ್ರಜಾಸತ್ತಾತ್ಮಕ ವಿದ್ಯಾರ್ಥಿ ಸಂಘಟನೆ (AIDSO) ಕರ್ನಾಟಕ ಘಟಕದ ಪ್ರಕಾರ, ಬೆಂಗಳೂರು, ಯಾದಗಿರಿ, ಹಾಸನ, ತುಮಕೂರು, ಮೈಸೂರು, ಬಳ್ಳಾರಿ ಹಾಗೂ ರಾಯಚೂರು ಸೇರಿದಂತೆ ಕನಿಷ್ಠ ಏಳು ಜಿಲ್ಲೆಗಳ ಸರ್ಕಾರಿ ಪಿಯು ಕಾಲೇಜುಗಳಿಗೆ ಭಾಗಶಃ ಪುಸ್ತಕಗಳು ಮಾತ್ರ ತಲುಪಿವೆ. ಬಂದಿರುವ ಪುಸ್ತಕಗಳು ವಿದ್ಯಾರ್ಥಿಗಳಿಗೆ ಸಾಕಾಗುತ್ತಿಲ್ಲ ಎಂದು ಆರೋಪಿಸಿದೆ.

ಅಭಿವೃದ್ಧಿ ಶಿಕ್ಷಣ ತಜ್ಞ ಪ್ರೊ. ನಿರಂಜನಾರಾಧ್ಯ ವಿ.ಪಿ. ಮಾತನಾಡಿ, ಈ ವಿಳಂಬವು ಆರ್ಥಿಕವಾಗಿ ಹಿಂದುಳಿದ ವಿದ್ಯಾರ್ಥಿಗಳ ಮೇಲೆ ಹೆಚ್ಚು ಪರಿಣಾಮ ಬೀರುತ್ತದೆ ಎಂದು ಆತಂಕ ವ್ಯಕ್ತಪಡಿಸಿದ್ದಾರೆ.

ಪಿಯು ಶಿಕ್ಷಣ ಅತ್ಯಂತ ಮಹತ್ವದ ಹಂತವಾಗಿದೆ. ಶ್ರೀಮಂತ ಕುಟುಂಬಗಳ ವಿದ್ಯಾರ್ಥಿಗಳು ಖಾಸಗಿ ಸಂಪನ್ಮೂಲ ಗಳು, ಡಿಜಿಟಲ್ ಸಾಧನಗಳು ಮತ್ತು ಇತರ ಅಧ್ಯಯನ ಸಾಮಗ್ರಿಗಳನ್ನು ಬಳಸಿಕೊಳ್ಳಬಹುದು. ಆದರೆ ಬಡ ವಿದ್ಯಾರ್ಥಿಗಳಿಗೆ ಉಚಿತ ಪಠ್ಯಪುಸ್ತಕಗಳೇ ಪ್ರಮುಖ ಕಲಿಕಾ ಸಾಧನ. ಆದ್ದರಿಂದ ಮುಖ್ಯಮಂತ್ರಿ ಈ ವಿಚಾರವನ್ನು ಗಂಭೀರವಾಗಿ ಪರಿಗಣಿಸಬೇಕು ಎಂದು ಹೇಳಿದ್ದಾರೆ.

AIDSO ರಾಜ್ಯ ಉಪಾಧ್ಯಕ್ಷೆ ಅಪೂರ್ವಾ ಸಿ.ಎಂ. ಮಾತನಾಡಿ, ಈ ವಿಳಂಬವು ಸಾಮಾಜಿಕ ಹಾಗೂ ಆರ್ಥಿಕವಾಗಿ ಹಿಂದುಳಿದ ವರ್ಗದ ವಿದ್ಯಾರ್ಥಿಗಳ ಮೇಲೆ ಹೆಚ್ಚು ಪರಿಣಾಮ ಬೀರುತ್ತದೆ ಎಂದು ತಿಳಿಸಿದ್ದಾರೆ.

ಆರ್ಥಿಕವಾಗಿ ಸದೃಢವಾಗಿರುವ ಕುಟುಂಬಗಳ ಮಕ್ಕಳು ಖಾಸಗಿ ಕಾಲೇಜುಗಳಲ್ಲಿ ಓದುತ್ತಾರೆ. ಆದರೆ, ಸರ್ಕಾರಿ ಕಾಲೇಜುಗಳ ವಿದ್ಯಾರ್ಥಿಗಳು ಮೊಬೈಲ್ ಫೋನ್ ಮತ್ತು ಉಚಿತ ಪಠ್ಯಪುಸ್ತಕಗಳನ್ನೇ ಅವಲಂಬಿಸಬೇಕಾದ ಪರಿಸ್ಥಿತಿಯಲ್ಲಿದ್ದಾರೆ. ಸರ್ಕಾರದ ಈ ನಿರ್ಲಕ್ಷ್ಯ ಬಡ ವಿದ್ಯಾರ್ಥಿಗಳ ಶಿಕ್ಷಣಕ್ಕೆ ದೊಡ್ಡ ಹೊಡೆತ ನೀಡುತ್ತಿದೆ ಎಂದು ಹೇಳಿದರು. ಇಂತಹ ನಿರ್ಲಕ್ಷ್ಯದಿಂದ ರಾಜ್ಯದಲ್ಲಿ ಶಿಕ್ಷಣದ ಖಾಸಗೀಕರಣಕ್ಕೆ ಮತ್ತಷ್ಟು ಉತ್ತೇಜನ ಸಿಗುವ ಅಪಾಯವಿದೆ ಎಂದೂ ಕಳವಳ ವ್ಯಕ್ತಪಡಿಸಿದ್ದಾರೆ.

# ಮೈಸೂರು, ಚಾಮರಾಜನಗರ ಜಿಲ್ಲೆಯಲ್ಲಿ ಉಪ್ಪಾರ ಕುಟುಂಬಕ್ಕೆ ನ್ಯಾಯ ಕೊಡಿಸಲು ಆಗ್ರಹಿಸಿ ಡಿಸಿಗೆ ಮನವಿ




ಗದಗ: ಮೈಸೂರು ಜಿಲ್ಲೆ ಹಾಗೂ ಚಾಮರಾಜನಗರ ಜಿಲ್ಲೆಯಲ್ಲಿ ಉಪ್ಪಾರ ಕುಟುಂಬಕ್ಕೆ ಆಗಿರುವ ಅನ್ಯಾಯ ಹಾಗೂ ಆರೋಪಿಗಳಿಗೆ ಕಠಿಣ ಶಿಕ್ಷೆ ನೀಡುವಂತೆ ಆಗ್ರಹಿಸಿ ನಗರದಲ್ಲಿ ಸೋಮವಾರ ಜಿಲ್ಲಾ ಮಹರ್ಷಿ ಭಗೀರಥ ಉಪ್ಪಾರ ಸಂಘದಿಂದ ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಿದರು.

ಮೈಸೂರು ಜಿಲ್ಲೆ ಟಿ.ನರಸೀಪುರ ತಾಲೂಕಿನ ಕೆಂಪಯ್ಯನಹುಂಡಿ ಗ್ರಾಮದಲ್ಲಿ ಉಪ್ಪಾರ ಸಮಾಜದ ಒಂದೇ ಕುಟುಂಬದ ಮೂವರು ಮೃತಪಟ್ಟಿದ್ದಾರೆ. ಶಿವಣ್ಣ, ನಾಗರತ್ನ, ರಕ್ಷಿತಾ ಮೃತ ಪಟ್ಟಿದ್ದಾರೆ. ಅವರ ಸಾವಿನ ಬಗ್ಗೆ ವಿವರವಾದ ಡೆತ್ ನೋಟ್ ಬರೆದಿಟ್ಟು ವಿಷಸೇವಿಸಿ ಆತ್ಮಹತ್ಯೆ ಮಾಡಿಕೊಂಡಿದ್ದಾರೆ.

ಅವರ ಸಾವಿಗೆ ಉಲ್ಲಾಸಗೌಡ ಎಂಬ ಕೀಚಕನ ಹೀನಕೃತ್ಯದಿಂದ ಮನನೊಂದು ಬಡ ಕುಟುಂಬ ಬಲಿಯಾಗಿದೆ. ಉಲ್ಲಾಸಗೌಡ ರಕ್ಷಿತಾಳಿಗೆ ಪ್ರೀತಿಸುವಂತೆ ದುಂಬಾಲು ಬಿದ್ದಿದ್ದನಂತೆ. ಅವಳು ನಿರಾಕರಿಸಿದರೂ ಅವನು ಪ್ರೀತಿಸುವ ನಾಟಕವಾಡಿ, ಮೋಸ ಮಾಡಿದ್ದಾನೆ. ಈ ಬಗ್ಗೆ ಕರೆದು ಬುದ್ದಿ ಮಾತು ಹೇಳಿದರೂ ಅವನು ತನ್ನ ದುಷ್ಟ, ದುರ್ಬುದ್ಧಿ ಮುಂದುವರೆಸಿದ್ದನಂತೆ. ಹಾಗಾಗಿ ಕುಟುಂಬಸ್ಥರು ರಕ್ಷಿತಾಳನ್ನು ಬೇರೊಬ್ಬರ ಜೊತೆ ಮದುವೆ ನಿಶ್ಚಯವಾಗಿತ್ತು. ಮದುವೆ 2 ದಿನ ಬಾಕಿ ಇತ್ತು. ಆಗ ಮದುವೆ ಆಗುವ ಹುಡುಗನಿಗೆ ರಕ್ಷಿತಾಳ ಬಗ್ಗೆ ಇಲ್ಲ ಸಲ್ಲದ ಆರೋಪ ಮಾಡಿದ್ದಾನೆ. ಮದುವೆ ಸಂಭ್ರಮದಲ್ಲಿರಬೇಕಾದ ಕುಟುಂಬ, ಉಲ್ಲಾಸಗೌಡನ ಕ್ರೌರ್ಯದಿಂದ ಮರ್ಯಾದೆಗೆ ಅಂಜಿ ಮಸನ ಸೇರಿದ್ದಾರೆ. ಕೂಡಲೇ ತಪ್ಪಿತಸ್ಥ ಆರೋಪಿಗೆ ಕಠಿಣ ಶಿಕ್ಷೆಯಾಗಬೇಕು. ಮೃತ ಕುಟುಂಬಕ್ಕೆ ನ್ಯಾಯ ಸಿಗಬೇಕೆಂದು ಎಂದು ಒತ್ತಾಯಿಸಿದರು.

ಚಾಮರಾಜನಗರ ಜಿಲ್ಲೆಯ ಮಸಣಾಪುರ ಎಂಬ ಗ್ರಾಮದಲ್ಲಿ ಉಪ್ಪಾರಶೆಟ್ಟರ್ ಚಂದ್ರು ಎಂಬ ಯುವಕನನ್ನು ದುರುದ್ದೇಶದಿಂದ ಅನ್ಯ ಕೋಮಿನವರು ಕಂಬಕ್ಕೆ ಕಟ್ಟಿಹಾಕಿ ಅರಬೆತ್ತಲೆಗೊಳಿಸಿ ಮನಸೋ ಇಚ್ಚೆ ಥಳಿಸಿದ್ದಾರೆ. ಡಾ.ಬಿ.ಆರ್ ಅಂಬೇಡ್ಕರ್ ಭಾವಚಿತ್ರಕ್ಕೆ ಅಪಮಾನ ಮಾಡಿದ್ದಿ ಎಂದು ಚಂದ್ರು ವಿರುದ್ಧ ಸುಳ್ಳು ಕಥೆ ಕಟ್ಟಿ, ಬಟ್ಟೆ ಬಿಚ್ಚಿ, ಚಪ್ಪಲಿ ಹಾರ ಹಾಕಿ, ಕಂಬಕ್ಕೆ ಕಟ್ಟಿಹಾಕಿ ಮಾರಣಾಂತಿಕ ಹಲ್ಲೆ ಮಾಡಿದ್ದಾರೆ. ಅಂಬೇಡ್ಕರ್ ಭಾವಚಿತ್ರಕ್ಕೆ ಅಪಮಾನ ಮಾಡುವುದನ್ನು ಸಮಸ್ತ ಉಪ್ಪಾರ ಸಮಾಜ ಸಹ ಖಂಡಿಸುತ್ತೆ. ಆದರೆ ದುರುದ್ದೇಶದಿಂದ ಫ್ರೀ ಪ್ಲಾನ್ ಮಾಡಿಕೊಂಡು ಬೆಳಗಿನ ಜಾವ ಕೆಲಸಕ್ಕೆ ಹೋಗುವ ವೇಳೆ ಹಿಡಿದು ಕಟ್ಟಿಹಾಕಿ ಹಲ್ಲೆ ಮಾಡಿರುವುದು ಖಂಡನೀಯ.

ಮುಖ್ಯಮಂತ್ರಿಗಳು ಹಾಗೂ ಗೃಹ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರು ಈ ಪ್ರಕರಣವನ್ನು ಗಂಭೀರವಾಗಿ ತೆಗೆದುಕೊಳ್ಳಬೇಕು. ಆರೋಪಿಗಳಿಗೆ ಕಠಿಣ ಶಿಕ್ಷೆ ಆಗಬೇಕು. ಅವರಿಗೆ ಕೊಡುವ ಶಿಕ್ಷೆ ಬೇರೊಬ್ಬರಿಗೆ ಮಾದರಿಯಾಗುವಂತೆ ಶಿಕ್ಷೆ ನೀಡಬೇಕೆಂದು ಜಿಲ್ಲಾ ಸಮಸ್ತ ಉಪ್ಪಾರ ಸಮಾಜದಿಂದ ಆಗ್ರಹಿಸಿದರು.

ಜಿಲ್ಲಾಧ್ಯಕ್ಷ ಭೀಮನಗೌಡ ಪಾಟೀಲ, ಪ್ರಧಾನ ಕಾರ್ಯದರ್ಶಿ ರಾಜು ಗದ್ದಿ, ಉಪಾಧ್ಯಕ್ಷ ಹನಮಂತ ಗೊಟಗೊಂಡ, ಶಿವಪುತ್ರಪ್ಪ ಕುಂದ್ರಳ್ಳಿ, ಮಹಾದೇವಪ್ಪ ಪ್ಯಾಟಿ, ಸದಸ್ಯರಾದ ಪಾಂಡುರಂಗ ಕನಕಾಪೂರ, ಚನ್ನಪ್ಪ ಹಸರಂಬಿ, ಶಿವರಾಜ ಉಪ್ಪಾರ, ಹನುಂಮತ ತೆಂಗುಂಟಿ, ಸಂತೋಷ ಉಪ್ಪಾರ, ಬಸವಣ್ಣೆಪ್ಪ ಉಪ್ಪಾರ ಇದ್ದರು.

# ಆಧ್ಯಾತ್ಮ ಭಾರತೀಯರ ಉಸಿರು: ಸಂಗಮೇಶ ಬಬಲೇಶ್ವರ

ವಿಜಯಪುರ: “ಜಗತ್ತಿಗೆ ವೇದೋಪನಿಷತ್ತುಗಳು ಹಾಗೂ ವಚನ ಸಾಹಿತ್ಯವನ್ನು ನೀಡಿದವರು ಭಾರತೀಯರು. ಆಧ್ಯಾತ್ಮ ನಮ್ಮ ಉಸಿರು, ಸಂಸ್ಕಾರಯುತ ಜೀವನ ನಮ್ಮ ಬದುಕಿನ ಬೆಳಕು. ದೇವಾಲಯಗಳು ನಮ್ಮ ಸಂಸ್ಕೃತಿಯ ಪ್ರತೀಕಗಳಾಗಿದ್ದು, ಸಮಾಜಕ್ಕೆ ಆಧ್ಯಾತ್ಮಿಕ ಮಾರ್ಗದರ್ಶನ ನೀಡುವ ಶ್ರದ್ಧಾ ಕೇಂದ್ರಗಳಾಗಿವೆ” ಎಂದು ಕರ್ನಾಟಕ ರಾಜ್ಯ ಬಾಲವಿಕಾಸ ಅಕಾಡೆಮಿಯ ನಿಕಟಪೂರ್ವ ಅಧ್ಯಕ್ಷ ಸಂಗಮೇಶ ಬಬಲೇಶ್ವರ ಹೇಳಿದರು.

ನಗರದ ಅಭಿವೃದ್ಧಿ ಬಡಾವಣೆಯಲ್ಲಿ ನೂತನವಾಗಿ ನಿರ್ಮಾಣಗೊಂಡಿರುವ ಶ್ರೀ ಅಭಯಾಂಜನೇಯ ದೇವಾಲಯದ ಮೂರ್ತಿ ಪ್ರತಿಷ್ಠಾಪನೆ ಹಾಗೂ ಕಳಸಾರೋಹಣ ಸಮಾರಂಭವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಪ್ರತಿ ಬಡಾವಣೆಯ ದೇವಾಲಯಗಳಲ್ಲಿ ಧಾರ್ಮಿಕ ಕಾರ್ಯಕ್ರಮಗಳ ಜೊತೆಗೆ ಮಕ್ಕಳ ವ್ಯಕ್ತಿತ್ವ ವಿಕಸನ, ಸಂಸ್ಕಾರ ನಿರ್ಮಾಣ ಹಾಗೂ ಅವರ ಪ್ರತಿಭೆ ಅನಾವರಣಗೊಳಿಸುವ ಚಟುವಟಿಕೆಗಳನ್ನು ಪ್ರತಿವರ್ಷ ಹಮ್ಮಿಕೊಳ್ಳುವಂತೆ ಅವರು ಕರೆ ನೀಡಿದರು. “ಮಕ್ಕಳೇ ಭಗವಂತನ ನಿಜಸ್ವರೂಪ. ಅವರ ಸರ್ವಾಂಗೀಣ ಬೆಳವಣಿಗೆಗೆ ದೇವಾಲಯಗಳು ಕೇಂದ್ರಗಳಾಗಬೇಕು” ಎಂದು ಅಭಿಪ್ರಾಯಪಟ್ಟರು.

ಕಾರ್ಯಕ್ರಮದ ದಿವ್ಯ ಸಾನ್ನಿಧ್ಯವನ್ನು ಹುಬ್ಬಳ್ಳಿಯ ಎರಡೇತ್ತಿನ ಮಠ ಹಾಗೂ ನಿಡೋಣಿ ಶ್ರೀಮಠದ ಪರಮಪೂಜ್ಯ ಶ್ರೀ ಸಿದ್ಧಲಿಂಗೇಶ್ವರ ಮಹಾಸ್ವಾಮೀಜಿ ವಹಿಸಿ ಆಶೀರ್ವಚನ ನೀಡಿದರು.



ದೇವಸ್ಥಾನದ ಅಭಿವೃದ್ಧಿ ಸಮಿತಿಯ ಅಧ್ಯಕ್ಷ ಎಸ್.ಎನ್. ಅರಿಕೇರಿ ಅಧ್ಯಕ್ಷತೆ ವಹಿಸಿದ್ದರು. ಮುಖ್ಯ ಅತಿಥಿಗಳಾಗಿ ವಿಜಯಪುರ ಮಹಾನಗರ ಪಾಲಿಕೆಯ ಮಹಾಪೌರ ಎಂ.ಎಸ್. ಕರಡಿ, ವಿಡಿಎ ಅಧ್ಯಕ್ಷ ಡಾ. ಗಂಗಾಧರ ಸಂಬಣ್ಣಿ, ಪಾಲಿಕೆ ಸದಸ್ಯರಾದ ಪ್ರೇಮಾನಂದ ಬಿರಾದಾರ್, ಗಿರೀಶ್ ಬಿರಾದಾರ್ ಸೇರಿದಂತೆ ಸೋಮನಾಥ ಕಳ್ಳಿಮನಿ, ಗುರುಲಿಂಗಪ್ಪ ಅಂಗಡಿ, ಡಿ.ಜಿ. ಬಿರಾದಾರ್, ಉಮೇಶ್ ವಂದಾಲ, ಸಂತೋಷ ತಳಕೇರಿ, ರತ್ನಾಕರ ಕುಲಕರ್ಣಿ, ವೈ.ಕೆ. ಕುಲಕರ್ಣಿ, ಜಗದೀಶ್ ಇಂಡಿ, ಡಾ. ಸೋಮು ನಿಡೋಣಿ, ಬಸವರಾಜ ಬಂಗಾರಿ, ಕೊಟ್ರೇಶ್ ಹರನಾಳ ಹಾಗೂ ವಿರೇಶ್ ಬಂಗಾರಿ ಉಪಸ್ಥಿತರಿದ್ದರು.

ಆಶಾ ನಿಡೋಣಿ ಮತ್ತು ಭಾರತಿ ಮುಚ್ಚಂಡಿ ಕಾರ್ಯಕ್ರಮ ನಿರೂಪಿಸಿದರು. ಬಾಲಾಜಿ ಸಿಂಗ್ ರಾಥೋಡ್ ಪ್ರಾಸ್ತಾವಿಕವಾಗಿ ಮಾತನಾಡಿದರು. ಸಮಾರಂಭದಲ್ಲಿ ಅಪಾರ ಸಂಖ್ಯೆಯ ಭಕ್ತರು ಭಾಗವಹಿಸಿದ್ದರು.

# ವಿಶೇಷ ಸಮಗ್ರ ಪರಿಷ್ಕರಣೆ (ಎಸ್‌ಐಆರ್) ಜಾಗೃತಿ ಜಾಥಾ
# ಅರ್ಹ ಮತದಾರರು ಮತದಾರರ ಪಟ್ಟಿಗೆ ಸೇರ್ಪಡೆಯಾಗಿ: ಜಿಲ್ಲಾಧಿಕಾರಿ ಸ್ನೇಹಲ್



ಧಾರವಾಡ: ಹುಬ್ಬಳ್ಳಿ-ಧಾರವಾಡ ಮಹಾನಗರ ಪಾಲಿಕೆಯು ಧಾರವಾಡ ಕಚೇರಿ ಆವರಣದಲ್ಲಿ ಇಂದು (ಜೂ.29) ಬೆಳಿಗ್ಗೆ ಭಾರತ ಚುನಾವಣಾ ಆಯೋಗದ ಸೂಚನೆಯ ಮೇರೆಗೆ ಮತದಾರರಲ್ಲಿ ವ್ಯಾಪಕ ಜಾಗೃತಿ ಮೂಡಿಸುವ ಸದುದ್ದೇಶದಿಂದ ಹುಬ್ಬಳ್ಳಿ ಧಾರವಾಡ ಪಶ್ಚಿಮ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ವಿಶೇಷ ಸಮಗ್ರ ಪರಿಷ್ಕರಣೆ (ಎಸ್‌ಐಆರ್)-2026 ಜಾಗೃತಿ ಜಾಥಾಗೆ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಚುನಾವಣಾಧಿಕಾರಿಯಾಗಿರುವ ಸ್ನೇಹಲ್ ಆರ್. ಮತ್ತು ಜಿಲ್ಲಾ ಪಂಚಾಯತ್ ಸಿಇಒ ಹಾಗೂ ಸ್ವೀಪ್ ಸಮಿತಿ ನೋಡಲ್ ಅಧಿಕಾರಿ ಭುವನೇಶ ಪಾಟೀಲ ಅವರು ಆಕಾಶಕ್ಕೆ ಬಲೂನ್‌ಗಳನ್ನು ಹಾರಿಸುವ ಮುಖಾಂತರ ಬೃಹತ್ ಜಾಗೃತಿ ಮೆರವಣಿಗೆಗೆ ಚಾಲನೆ ನೀಡಿದರು.

ವೇದಿಕೆ ಕಾರ್ಯಕ್ರಮವನ್ನು ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಚುನಾವಣಾಧಿಕಾರಿಯಾಗಿರುವ ಸ್ನೇಹಲ್ ಆರ್. ಮತ್ತು ಜಿಲ್ಲಾ ಪಂಚಾಯತ್ ಸಿಇಒ ಹಾಗೂ ಸ್ವೀಪ್ ಸಮಿತಿ ನೋಡಲ್ ಅಧಿಕಾರಿ ಭುವನೇಶ್ವರ ಪಾಟೀಲ ಅವರು ಗಿಡಕ್ಕೆ ನೀರು ಹಾಕುವ ಮುಖಾಂತರ ಉದ್ಘಾಟಿಸಿದರು.

ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಚುನಾವಣಾಧಿಕಾರಿಯಾಗಿರುವ ಸ್ನೇಹಲ್ ಆರ್. ಅವರು ಮಾತನಾಡಿ, ದೋಷರಹಿತ ಹಾಗೂ ನಿಖರವಾದ ಮತದಾರರ ಪಟ್ಟಿಯ ಅವಶ್ಯಕತೆಯನ್ನು ವಿವರಿಸಿದರು. ಪ್ರತಿಯೊಬ್ಬ ಅರ್ಹ ನಾಗರಿಕನೂ ಎನ್ಯುಮರೇಷನ್ ಫಾರ್ಮ್ ಅನ್ನು ತಪ್ಪದೇ ಭರ್ತಿ ಮಾಡಿ ಸಲ್ಲಿಸುವಂತೆ ಹೇಳಿದರು.

ಜಿಲ್ಲಾ ಪಂಚಾಯತ್ ಸಿಇಒ ಹಾಗೂ ಸ್ವೀಪ್ ಸಮಿತಿ ನೋಡಲ್ ಅಧಿಕಾರಿ ಭುವನೇಶ್ವರ ಪಾಟೀಲ ಅವರು ಮಾತನಾಡಿ, ಪ್ರಜಾಪ್ರಭುತ್ವ ವ್ಯವಸ್ಥೆಯ ಬೇರನ್ನು ಗಟ್ಟಿಗೊಳಿಸುವಲ್ಲಿ ವಿಶೇಷ ಸಮಗ್ರ ಪರಿಷ್ಕರಣೆ (ಎಸ್‌ಐಆರ್) ಪ್ರಕ್ರಿಯೆಯ ಪಾತ್ರ ಹಿರಿದಾಗಿದ್ದು, ರಾಜಕೀಯ ಪಕ್ಷಗಳು, ಯುವ ಮತದಾರರು, ಬೂತ್ ಮಟ್ಟದ ಅಧಿಕಾರಿಗಳು ಮತ್ತು ಏಜೆಂಟರು ಸೇರಿದಂತೆ ಸಾರ್ವಜನಿಕರೆಲ್ಲರೂ ಇದರಲ್ಲಿ ಸಕ್ರಿಯವಾಗಿ ಕೈಜೋಡಿಸಬೇಕು ಎಂದು ವಿನಂತಿಸಿದರು.

ಜಾಥಾವು ಪಾಲಿಕೆ ಆವರಣದಿಂದ ಹೊರಟು ಮಹಾರಾಣಾ ಪ್ರತಾಪ ವೃತ್ತ ಹಾಗೂ ಸ್ವಾಮಿ ವಿವೇಕಾನಂದ ವೃತ್ತದ ಮುಖಾಂತರ ಸಾಗಿ, ಕೆಸಿಸಿ ಬ್ಯಾಂಕ್ ಮಾರ್ಗವಾಗಿ ಕಲಾಭವನದ ಆವರಣವನ್ನು ತಲುಪಿ ಸಂಪನ್ನಗೊಂಡಿತು.

ಈ ಬೃಹತ್ ಜಾಗೃತಿ ಅಭಿಯಾನದಲ್ಲಿ ಜಿಲ್ಲಾ ಪಂಚಾಯತ ಯೋಜನಾ ನಿರ್ದೇಶಕ ಬಿ.ಎಸ್. ರಾಠೋಡ, ಮತದಾರರ ನೋಂದಣಾಧಿಕಾರಿ ಇಸ್ಮಾಯಿಲ್ ಸಾಹೇಬ್ ಶಿರಹಟ್ಟಿ, ಸಹಾಯಕ ಅಧಿಕಾರಿ ಉಮೇಶ ಸವಣೂರ, ಪಾಲಿಕೆಯ ವಲಯ ಕಚೇರಿ ಆಯುಕ್ತರಾದ ಅರವಿಂದ ಜಮಖಂಡಿ, ಶಂಕರ ಪಾಟೀಲ ಮತ್ತು ರಮೇಶ್ ನ್ಯೂಲ್ವಿ ಹಾಜರಿದ್ದರು. ಜಾಥಾದಲ್ಲಿ ನೂರಾರು ಸಂಖ್ಯೆಯಲ್ಲಿ ಪಾಲ್ಗೊಂಡಿದ್ದ ವಿವಿಧ ಇಲಾಖೆಗಳ ಸಿಬ್ಬಂದಿ, ಚುನಾವಣಾ ಕಾರ್ಯಕರ್ತರು, ಯುವ ಮತದಾರರು ಹಾಗೂ ಸಾರ್ವಜನಿಕರು 'ದೋಷಮುಕ್ತ ಮತದಾರರ ಪಟ್ಟಿ-ಬಲಿಷ್ಠ ಪ್ರಜಾಪ್ರಭುತ್ವ' ಎಂಬ ಮೂಲ ಸಂದೇಶವನ್ನು ಜನರಿಗೆ ತಲುಪಿಸುವಲ್ಲಿ ಯಶಸ್ವಿಯಾದರು.

# ಅಂತರಾಷ್ಟ್ರೀಯ ಮಾದಕ ವಸ್ತು ದುರುಪಯೋಗ ಹಾಗೂ ಅಕ್ರಮ ಸಾಗಾಣಿಕೆ ವಿರೋಧಿ ದಿನ ಕುರಿತು ಜಾಗೃತಿ ಕಾರ್ಯಕ್ರಮ



ಧಾರವಾಡ: ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಶಾಲಾ ಶಿಕ್ಷಣ ಇಲಾಖೆ (ಪದವಿ-ಪೂರ್ವ) ಹಾಗೂ ಕಿಟೆಲ್ ವಿಜ್ಞಾನ ಪದವಿ ಪೂರ್ವ ಮಹಾವಿದ್ಯಾಲಯ ಧಾರವಾಡ ಇವರ ಸಂಯುಕ್ತ ಆಶ್ರಯದಲ್ಲಿ ಧಾರವಾಡದ ಕಿಟೆಲ್ ವಿಜ್ಞಾನ ಪದವಿ ಪೂರ್ವ ಮಹಾವಿದ್ಯಾಲಯದಲ್ಲಿ ಅಂತರಾಷ್ಟ್ರೀಯ ಮಾದಕ ವಸ್ತು ದುರುಪಯೋಗ ಹಾಗೂ ಅಕ್ರಮ ಸಾಗಾಣಿಕೆ ವಿರೋಧಿ ದಿನ ಕುರಿತು ಜಾಗೃತಿ ಕಾರ್ಯಕ್ರಮವನ್ನು ಇಂದು (ಜೂ.29) ಹಮ್ಮಿಕೊಳಲಾಗಿತ್ತು.

ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರು ಆಗಿರುವ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಎನ್. ವಿ. ವಿಜಯ ಅವರು ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿ, ಮಾದಕ ವಸ್ತು ಸೇವನೆ, ಸಾಗಣೆ ಹಾಗೂ ಅದನ್ನು ಬೆಳೆಯುವದರಿಂದ ಇರುವ ಕಾನೂನಿನ ಶಿಕ್ಷೆ ಹಾಗೂ ದಂಡದ ಕುರಿತು ವಿದ್ಯಾರ್ಥಿಗಳೊಂದಿಗೆ ಸಮಾಲೋಚನೆ ಮಾಡಿ, ರೈತರು ತಮ್ಮ ಹೊಲಗಳಲ್ಲಿ ಮಾದಕ ವಸ್ತುಗಳನ್ನು ಬೆಳೆಸುವುದು ಕಾನೂನಾತ್ಮಕ ಅಪರಾಧವಾಗಿದೆ. ಇದರ ಬಗ್ಗೆ ರೈತರಿಗೆ ಜಾಗೃತಿಯನ್ನು ಮೂಡಿಸಬೇಕೆಂದು ವಿದ್ಯಾರ್ಥಿಗಳಿಗೆ ಕರೆನೀಡಿದರು. ನಿಮ್ಮ ಸುತ್ತಮುತ್ತ ಯಾರಾದರೂ ಮಾದಕ ವಸ್ತು ವ್ಯಸನಿಗಳಿದ್ದರೆ, ಅವರನ್ನು ಅದರಿಂದ ಮುಕ್ತಗೊಳಿಸಲು ಪ್ರಯತ್ನಿಸಿ ಎಂದು ತಿಳಿಸಿ ವಿದ್ಯಾರ್ಥಿಗಳಿಗೆ ಪೋಕ್ಸೊ ಕಾಯಿದೆಯ ಅಧಿನಿಯಮದ ಕುರಿತು ಅರಿವಿರಬೇಕು ಎಂದು ಕಿವಿಮಾತು ಹೇಳಿದರು.

ಧಾರವಾಡದ ಶಾಲಾ ಶಿಕ್ಷಣ ಇಲಾಖೆ (ಪದವಿ-ಪೂರ್ವ)ಯ ಉಪ ನಿರ್ದೇಶಕಿ ಡಾ. ತೇಜಸ್ವಿನಿ ನಾರಾಯಣಕರ ಅವರು ಮಾತಾನಾಡಿ, ವ್ಯಸನಮುಕ್ತ ಸಮಾಜ ನಿರ್ಮಾಣ ಮಾಡಲು ನಾವೆಲ್ಲರೂ ಒಟ್ಟಾಗಿ ಕಾರ್ಯನಿರ್ವಹಿಸಬೇಕು. ಇದಕ್ಕಾಗಿ ಶಾಲಾ ಶಿಕ್ಷಣ ಇಲಾಖೆ ನಿರಂತರವಾಗಿ ಶ್ರಮಿಸುತ್ತಿದೆ ಎಂದು ತಿಳಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಮಹಾವಿದ್ಯಾಲಯದ ಪ್ರಾಚಾರ್ಯೆ ಸವಿತಾ ಎಸ್. ನಂದಿಕೇಶ್ವರ ಅವರು ಮಾತನಾಡಿ, ಮಾದಕ ವಸ್ತು ಸೇವನೆಯಿಂದ ಯುವ ಜನತೆ ಮಾನಸಿಕ ಖಿನ್ನತೆಗೆ ಒಳಗಾಗಿ ತನ್ನತನವನ್ನು ಕಳೆದುಕೊಂಡು ತನ್ನ ಶೈಕ್ಷಣಿಕ ಗುರಿಯಿಂದ ವಿಮುಖರಾಗುವರು. ಇದ್ದರಿಂದ ಕುಟುಂಬದವರಿಗೂ ತೊಂದರೆಯನ್ನು ಉಂಟುಮಾಡುವರು. ಆದ್ದರಿಂದ ನಾವೆಲ್ಲಾ ಪ್ರಜ್ಞಾವಂತರಾಗಿ ವ್ಯಸನಮುಕ್ತ ಸಮಾಜ ನಿರ್ಮಿಸಲು ಶ್ರಮಿಸೋಣ. ಬದಲಾವಣೆ ನಮ್ಮಿಂದಲೆ ಆರಂಭವಾಗಲಿ ಎಂದು ಆಶಿಸಿದರು.

ಕಾರ್ಯಕ್ರಮದಲ್ಲಿ ಸಂಪನ್ಮೂಲ ವ್ಯಕ್ತಿಗಳಾದ ಡಾ. ಮೋಹನ ಕುಮಾರ ಥಂಬದ ಹಾಗೂ ಡಾ. ಅಶೋಕ ಕೋರಿ ಉಪಸ್ಥಿತರಿದ್ದರು.

ಆಂಥೊನಿ ವಿಜಯಕುಮಾರ ಅವರು ಪ್ರಾರ್ಥಿಸಿದರು. ಸಲಿಮ್ ಜಕ್ಕಲಿ ಸ್ವಾಗತಿಸಿದರು. ಜಾವೆದ್ ಮೂಡಿ ವಂದಿಸಿದರು. ಲಕ್ಷ್ಮಿ ಛಾಯಾ ನಿರೂಪಿಸಿದರು.

ಮಹಾವಿದ್ಯಾಲಯದ ಬೊಧಕ ಬೋಧಕೇತರ ಸಿಬ್ಬಂದಿ ಹಾಗೂ ವಿದ್ಯಾರ್ಥಿ ವಿದ್ಯಾರ್ಥಿನಿಯರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

# ನಾಡಪ್ರಭು ಶ್ರೀ ಕೆಂಪೇಗೌಡ ಅವರು ಹಾಕಿಕೊಟ್ಟ ದೂರದೃಷ್ಟಿಯ ಯೋಜನೆಗಳು ಇಂದಿಗೂ ಪ್ರಸ್ತುತ: ಅಪರ ಜಿಲ್ಲಾಧಿಕಾರಿ ಗೀತಾ ಸಿ.ಡಿ.

ಧಾರವಾಡ: ಕರ್ನಾಟಕ ಇತಿಹಾಸದಲ್ಲಿ ಬಹಳಷ್ಟು ರಾಜ-ಮಹಾರಾಜರು ಆಗಿಹೋಗಿದ್ದಾರೆ. ಆದರೆ ಕೆಂಪೇಗೌಡರು ಬೆಂಗಳೂರು ನಗರ ನಿರ್ಮಾಣ ಮಾಡುವ ಮೂಲಕ ಇಂದು ವಿಶ್ವದ ಭೂಪಟದಲ್ಲಿ ಬೆಂಗಳೂರು ಎದ್ದು ಕಾಣುವಂತೆ ಮಾಡಿದ ಕೀರ್ತಿ ಕೆಂಪೇಗೌಡರಿಗೆ ಸಲ್ಲುತ್ತದೆ ಎಂದು ಅಪರ ಜಿಲ್ಲಾಧಿಕಾರಿ ಗೀತಾ ಸಿ.ಡಿ. ಅವರು ಹೇಳಿದರು.

ಅವರು ಜೂನ್ 27, 2026 ರಂದು ಕರ್ನಾಟಕ ಕುಲಪುರೋಹಿತ ಆಲೂರ ವೆಂಕಟರಾವ ಸಾಂಸ್ಕೃತಿಕ ಭವನದಲ್ಲಿ ಜಿಲ್ಲಾಡಳಿತ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಆಯೋಜಿಸಿದ್ದ ನಾಡಪ್ರಭು ಶ್ರೀ ಕೆಂಪೇಗೌಡ ಜಯಂತಿ ಕಾರ್ಯಕ್ರಮ ಉದ್ಘಾಟಿಸಿ, ಮಾತನಾಡಿದರು.

ನಾಡಪ್ರಭು ಶ್ರೀ ಕೆಂಪೇಗೌಡ ಅವರು 500 ವರ್ಷಗಳ ಹಿಂದೆ ಹಾಕಿಕೊಟ್ಟ ದೂರದೃಷ್ಟಿಯ ಯೋಜನೆಗಳು ಕರ್ನಾಟಕಕ್ಕೆ ಇಂದಿಗೂ ಪ್ರಸ್ತುತವಾಗಿವೆ. ಕೆಂಪೇಗೌಡರ ಸರ್ವಧರ್ಮ ಸಮನ್ವಯತೆ, ಯೋಜನಾಬದ್ಧ ನಗರ ನಿರ್ಮಾಣ ಕಾರ್ಯ, ಕೃಷಿ ಪರಿಸರ ಬೆಳವಣಿಗೆಗೆ ಜಾರಿಗೆ ತಂದ ನೀತಿಗಳು, ವ್ಯಾಪಾರ, ವಾಣಿಜ್ಯ, ಉದ್ಯೋಗಕ್ಕಾಗಿ ಅವರು ಅಂದು ಹಾಕಿಕೊಟ್ಟ ಯೋಜನೆಗಳೇ ಇಂದಿಗೂ ಮಾದರಿಯಾಗಿವೆ. ಬೆಂಗಳೂರನ್ನು ಜಾಗತಿಕ ಮಟ್ಟದಲ್ಲಿ ಗುರುತಿಸಲು ಕಾರಣ ಕೆಂಪೇಗೌಡರ ಕೊಡುಗೆಗಳು ಎಂದರು.

ಕಾರ್ಯಕ್ರಮದಲ್ಲಿ ಹುಬ್ಬಳ್ಳಿ ವರದಶ್ರೀ ಫೌಂಡೇಶನ ಸಂಸ್ಥಾಪಕ ಮಲ್ಲಿಕಾರ್ಜುನ ರಡ್ಡೇರ, ಹಾಗೂ ಕಾರ್ಯದರ್ಶಿ ಸಿದ್ದು ಸಿರಸಂಗಿ ಅವರು ನಾಡಪ್ರಭು ಶ್ರೀ ಕೆಂಪೇಗೌಡರ ಕುರಿತು ವಿಶೇಷ ಉಪನ್ಯಾಸ ನೀಡಿದರು.



ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಕುಮಾರ ಬೆಕ್ಕೇರಿ ಅವರು ಸ್ವಾಗತಿಸಿದರು. ಜಯಲಕ್ಷ್ಮೀ ಹೆಚ್. ಅವರು ಕಾರ್ಯಕ್ರಮ ನಿರೂಪಿಸಿದರು.

ವೇದಿಕೆಯಲ್ಲಿ ಹುಬ್ಬಳ್ಳಿ-ಧಾರವಾಡ ಮಹಾನಗರ ಪಾಲಿಕೆ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಅಧ್ಯಕ್ಷ ಪ್ರಕಾಶ ಹಳಿಯಾಳ, ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಉಮೇಶ ಬೊಮ್ಮಕ್ಕನವರ, ಸಮಾಜದ ಮುಖಂಡರಾದ ಕೃಷ್ಣಗೌಡ, ರಾಘವೇಂದ್ರಗೌಡ, ಮಾಣಿಕ್ಯ ಚಿಲ್ಲೂರ, ಹನುಮಂತಪ್ಪ ನೇಗಿನಾಳ ಉಪಸ್ಥಿತರಿದ್ದರು.

ವಿವಿಧ ಕನ್ನಡಪರ ಸಂಘಟನೆಗಳ ಸದಸ್ಯರು, ಸಂಘ-ಸಮಾಜದ ಮುಖಂಡರು, ಕಲಾವಿದರು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

# ಸಮಾಜಮುಖಿ ಕಾರ್ಯಗಳನ್ನು ರೋಟರಿ ಹಾಗೂ ಇನ್ನರ್ ವ್ಹೀಲ್ ಸಂಸ್ಥೆಗಳು ಜಗತ್ತಿನಾಧ್ಯಂತ ಮಾದರಿಯಾಗಿ ಮಾಡುತ್ತ ಜನರ ಮನದಲ್ಲಿ ಉಳಿದಿದ್ದಾವೆ



ಗೋಕಾಕ: ರೋಟರಿ ಸಂಸ್ಥೆಯ ನೂತನ ಪದಾಧಿಕಾರಿಗಳು.

ಗೋಕಾಕ: ಸಮಾಜಮುಖಿ ಕಾರ್ಯಗಳನ್ನು ರೋಟರಿ ಹಾಗೂ ಇನ್ನರ್ ವ್ಹೀಲ್ ಸಂಸ್ಥೆಗಳು ಜಗತ್ತಿನಾಧ್ಯಂತ ಮಾದರಿಯಾಗಿ ಮಾಡುತ್ತ ಜನರ ಮನದಲ್ಲಿ ಉಳಿದಿದ್ದಾವೆ ಎಂದು ರೋಟರಿ ಸಂಸ್ಥೆಯ ಜ್ಯೂನಲ್ ಕೋಆರ್ಡಿನೇಟರ್ ಸತೀಶ ಧಮನಕರ ಹೇಳಿದರು.

ಅವರು, ರವಿವಾರದಂದು ನಗರದ ರೋಟರಿ ರಕ್ತ ಭಂಡಾರ ಸಭಾ ಭವನದಲ್ಲಿ ಇಲ್ಲಿಯ ರೋಟರಿ ಹಾಗೂ ಇನ್ನರ್ ವ್ಹೀಲ್ ಸಂಸ್ಥೆಯ ನೂತನ ಪದಾಧಿಕಾರಿಗಳ ಅಧಿಕಾರ ಸ್ವೀಕಾರ ಸಮಾರಂಭದಲ್ಲಿ ಅಧಿಕಾರ ಹಸ್ತಾಂತರ ಅಧಿಕಾರಿಯಾಗಿ ಪಾಲ್ಗೊಂಡು ಮಾತನಾಡುತ್ತಿದ್ದರು.

ಸಾಮಾಜಿಕ, ಶೈಕ್ಷಣಿಕ ಹಾಗೂ ಆರೋಗ್ಯ ಕ್ಷೇತ್ರಗಳಿಗೆ ಈ ಸಂಸ್ಥೆಗಳು ವಿಶೇಷ ಕೊಡುಗೆ ನೀಡುತ್ತಿವೆ. ಇಲ್ಲಿಯ ರೋಟರಿ ಸಂಸ್ಥೆ ಬ್ಲಡ್ ಬ್ಯಾಂಕ ಸ್ಥಾಪಿಸಿ ಜನರ ಜೀವ ಉಳಿಸುವಂತಹ ಪವಿತ್ರ ಕಾರ್ಯ ಮಾಡುತ್ತಿದೆ. ಪ್ರಕೃತಿ ವಿಕೋಪದಂತಹ ಸಮಯದಲ್ಲೂ ಜನರ ಸಂಕಷ್ಟಗಳಿಗೆ ಸ್ಪಂಧಿಸುತ್ತ ಜನರ ಪ್ರೀತಿಗಳಿಸಿದೆ. ನೂತನ ಪದಾಧಿಕಾರಿಗಳ ನೇತ್ರತ್ವದಲ್ಲಿ ಈ ಸಂಸ್ಥೆಗಳಿಂದ ಇನ್ನು ಹೆಚ್ಚಿನ ಕೊಡುಗೆ ಸಮಾಜಕ್ಕೆ ದೊರೆಯಲಿ ಎಂದು ಆಶಿಸಿದರು.

ಸಮಾರಂಭದ ದಿವ್ಯ ಸಾನಿಧ್ಯವನ್ನು ಮುನವಳ್ಳಿಯ ಶ್ರೀ ಸೋಮಶೇಖರ ಮಠದ ಮುರುಘರಾಜೇಂದ್ರ ಮಹಾಸ್ವಾಮಿಗಳು ವಹಿಸಿದ್ದರು.

ಅತಿಥಿಗಳಾಗಿ ರಾಜ್ಯಸಭಾ ಸದಸ್ಯ ಈರಣ್ಣ ಕಡಾಡಿ, ರೋಟರಿ ಸಹಾಯಕ ಪ್ರಾಂತಪಾಲ ರಾಜೇಂದ್ರ ಪಾಟೀಲ, ಬೆಳಗಾವಿ ಇನ್ನರ್ ವ್ಹೀಲ್ ಸಂಸ್ಥೆಯ ಸೋನಾಲ ಧಾಮನಕರ ಹಾಗೂ ನೂತನ ರೋಟರಿ ಅಧ್ಯಕ್ಷ ಪ್ರಕಾಶ ವರದಾಯಿ, ಕಾರ್ಯದರ್ಶಿ ಪ್ರಸಾದ ಸೊಲಾಪೂರಮಠ, ಖಜಾಂಚಿ ಚಂದ್ರಶೇಖರ ಕಡೆವಾಡಿ, ಇನ್ನರ್ ವ್ಹೀಲ್ ಸಂಸ್ಥೆಯ ನೂತನ ಅಧ್ಯಕ್ಷೆ ಅನಸೂಯಾ ಧುಳಾಯಿ, ಕಾರ್ಯದರ್ಶಿ ವಿದ್ಯಾ ಮಗದುಮ, ಖಜಾಂಚಿ ರಾಜೇಶ್ವರಿ ಕಲ್ಲೋಳಿ, ನಿಕಟಪೂರ್ವ ಪದಾಧಿಕಾರಿಗಳಾದ ಗಿರೀಶ ಝುಂವರ, ಬಸವರಾಜ ಹುಳ್ಳೇರ, ಅನುಪಾ ಕೌಶಿಕ, ಜಯಾ ಕಮತ ಇದ್ದರು.



ಗೋಕಾಕ: ಇನ್ನರ್ ವ್ಹೀಲ್ ಸಂಸ್ಥೆಯ ನೂತನ ಪದಾಧಿಕಾರಿಗಳು.

# ಮತದಾರರ ಪಟ್ಟಿಗಳ ವಿಶೇಷ ಸಮಗ್ರ ಪರಿಷ್ಕರಣೆ (SIR) ಜಾಗೃತಿ ಜಾಥಾ




ಅಥಣಿ : ತಾಲೂಕಾ ಸ್ವೀಪ್ ಸಮಿತಿ ವತಿಯಿಂದ ಮತದಾರರ ಪಟ್ಟಿಗಳ ವಿಶೇಷ ಸಮಗ್ರ ಪರಿಷ್ಕರಣೆ (ಖಖಖ) ಕುರಿತು ಜಾಗೃತಿಗಾಗಿ ನಗರದಲ್ಲಿ ಸೋಮವಾರ ವಿದ್ಯಾರ್ಥಿಗಳಿಂದ ಜಾಗೃತಿ ಜಾಥಾ ಜರುಗಿತು.

ಇಲ್ಲಿನ ತಾಲೂಕಾ ಪಂಚಾಯಿತಿ ಅಥಣಿ ಕಾರ್ಯಾಲಯದ ಆವರಣದಲ್ಲಿ ತಾಲೂಕಾ ಅಧ್ಯಕ್ಷರು ಸ್ವೀಪ್ ಸಮಿತಿಯ ಕಾರ್ಯನಿರ್ವಾಹಕ ಅಧಿಕಾರಿಗಳು ತಾಲೂಕು ಪಂಚಾಯಿತಿ ಅಥಣಿ ಶಿವಾನಂದ ಕಲ್ಲಾಪುರ ಜಾಥಾಗೆ ಚಾಲನೆ ನೀಡಿದರು.

ತಾಲೂಕಾ ಪಂಚಾಯಿತಿ ಕಾರ್ಯಾಲಯ, ವಿಕ್ರಂಪೂರ , ರಾಘವೇಂದ್ರ ಮಠದ ರಸ್ತೆಯ ಮಾರ್ಗವಾಗಿ ಜಾಥಾ ಸಾಗಿ, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯ ಶಿಕ್ಷಕರು, ಕಾರ್ಯಾಲಯದ ಆವರಣದಲ್ಲಿ ಮುಕ್ತಾಯಗೊಂಡಿತು.

ಜಾಥಾದಲ್ಲಿ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಅಥಣಿ, ಸಿಡಿಪಿಓ ಅಥಣಿ, ಎನ್ ಆರ್ ಎಲ್ ಎಂ ಸಿಬ್ಬಂದಿ ವರ್ಗದವರು, ತಾ.ಪಂ ಕಚೇರಿ ಎಲ್ಲ ಸಿಬ್ಬಂದಿ ವರ್ಗದವರು. ನೂರಾರು ವಿದ್ಯಾರ್ಥಿಗಳು ಭಾಗವಹಿಸಿದ್ದರು.

# ರಾಜಸ್ಥಾನಿ ಕಿರಾಣಿ ಸೇರಿದಂತೆ ಮತ್ತೀತರ ಅಂಗಡಿ ತೆರವು ಮಾಡುವಂತೆ ಆಗ್ರಹ




ಗೋಕಾಕ: ತಾಲೂಕಿನ ಬೆಟಗೇರಿ ಗ್ರಾಮ ಪಂಚಾಯತಿ ಪಿಡಿಓ ಎಸ್.ಆರ್.ಪತ್ತಾರ ಅವರಿಗೆ ಸ್ಥಳೀಯ ಅಂಗಡಿ ಮುಂಗಟ್ಟುಗಾರರು ಮನವಿ ಸಲ್ಲಿಸುತ್ತಿರುವದು.

ಗೋಕಾಕ: ತಾಲೂಕಿನ ಬೆಟಗೇರಿ ಗ್ರಾಮದ ಎಲ್ಲ ಅಂಗಡಿ ಮುಂಗಟ್ಟುಗಳ ಸ್ಥಳೀಯ ಮಾಲೀಕರು ಹೊರರಾಜ್ಯ( ರಾಜಸ್ಥಾನ)ದಿಂದ ಬಂದು ಬೆಟಗೇರಿ ಗ್ರಾಮದಲ್ಲಿ ವಿವಿಧ ಅಂಗಡಿಗಳನ್ನು ತರೆದು ವ್ಯಾಪಾರ ವಹಿವಾಟು ಮಾಡುತ್ತಿದ್ದು, ರಾಜಸ್ಥಾನಿ ಕಿರಾಣಿ ಸೇರಿದಂತೆ ಮತ್ತೀತರ ಅಂಗಡಿ ತೆರವು ಮಾಡುವಂತೆ ಆಗ್ರಹಿಸಿ ಬೆಟಗೇರಿ ಗ್ರಾಮದ ಎಲ್ಲ ಅಂಗಡಿಕಾರರು, ಯುವಕರು, ಸ್ಥಳೀಯರು ಸೇರಿ ಸ್ಥಳೀಯ ಗ್ರಾಮ ಪಂಚಾಯತಿ ಕಾರ್ಯಾಲಯದಲ್ಲಿ ಪಿಡಿಓ ಎಸ್.ಆರ್.ಪತ್ತಾರ ಅವರಿಗೆ ಜೂ.29 ರಂದು ಮನವಿ ಸಲ್ಲಿಸಿದರು.

ಸ್ಥಳೀಯ ಯುವಕರು ಶಿಕ್ಷಣ ಕಲಿತು ನಿರುದ್ಯೋಗಿಗಳಾಗಿದ್ದು, ಸ್ವ ಗ್ರಾಮದಲ್ಲಿ ಯುವಕರು ಉದ್ಯೋಗ ಮಾಡಲು ಅವಕಾಶ ಕಲ್ಪಿಸಿಕೊಡಬೇಕೆಂದು ವಿನಂತಿಸಿ ಕೊಂಡರು. ಹೊರರಾಜ್ಯ(ರಾಜಸ್ಥಾನ)ದಿಂದ ಬಂದ ಅಂಗಡಿ ಮುಂಗಟ್ಟುಗಾರರಿಗೆ ಬೆಟಗೇರಿ ಗ್ರಾಮದಲ್ಲಿ ವ್ಯಾಪಾರ ಮಾಡಲು ಅವಕಾಶ ಕಲ್ಪಿಸಿಕೊಡಬಾರದು. ತಮ್ಮ ಗ್ರಾಮ ಪಂಚಾಯತಿಯಿಂದ ಅಂಗಡಿ ತೆರೆಯಲು ಪರವಾಣಿಗೆ ಪತ್ರ ನೀಡಬಾರದು. ಆರಂಭದ ಹಂತದಲ್ಲಿರುವ ಕಿರಾಣಿಅಂಗಡಿ ಬೇಗ ತೆರವು ಮಾಡಿಸಬೇಕು ಎಂದು ಗ್ರಾಪಂ ಪಿಡಿಓ ಅವರಲ್ಲಿ ಈ ವೇಳೆ ವಿನಂತಿಸಿಕೊಂಡರು.

ಇಲ್ಲಿಯ ಗ್ರಾಪಂ ಪಿಡಿಓ ಎಸ್.ಆರ್.ಪತ್ತಾರ ಅವರು ರಾಜಸ್ಥಾನಿ ಅಂಗಡಿ ಅವರಿಗೆ ಗ್ರಾಪಂ ವತಿಯಿಂದ ನೋಟಿಸ್ ನೀಡಿ, ವಿಚಾರಿಸಿ ಆರಂಭದ ಹಂತದಲ್ಲಿರುವ ರಾಜಸ್ಥಾನಿ ಅಂಗಡಿ ಮಾಲೀಕರ ಹೇಳಿಕೆ ಪಡೆದು ತಮಗೆ ತಿಳಿಸುತ್ತೇನೆ ಎಂದು ಈ ವೇಳೆ ಹೇಳಿದರು.

ಗ್ರಾಪಂ ಕಾರ್ಯದರ್ಶಿ ಮಾರುತಿ ತಳವಾರ, ಈರಪ್ಪ ದೇಯಣ್ಣವರ, ಈರಣ್ಣ ಬಳಿಗಾರ, ರಾಮಪ್ಪ ಮುಧೋಳ, ರಫೀಕ ಮಿರ್ಜಾನಾಯ್ಕ, ಮಹಾಂತೇಶ ಸಿದ್ನಾಳ, ಸಂಗಯ್ಯ ಹಿರೇಮಠ, ಹನುಮಂತ ಕಾಡದವರ, ಮುತ್ತೆಪ್ಪ ಕನೋಜಿ, ಮುತ್ತೆಪ್ಪ ಕುರಬರ, ಕಾಳಪ್ಪ ಕಂಬಾರ, ನಾಗಪ್ಪ ಚಂದರಗಿ, ಉದಯ ಕೋಣಿ, ರಮೇಶ ದಂಡಿನ, ಸದಾಶಿವ ದಂಡಿನ, ವೀರಭದ್ರ ಪಡಶೆಟ್ಟಿ, ಗುಳಪ್ಪ ಅಜ್ಜನಕಟ್ಟಿ, ದಸ್ತಗೀರಸಾಬ ಯಲಿಗಾರ, ಫಿರೋಜ ಮಿರ್ಜಾನಾಯ್ಕ, ರಮೇಶ ಕಂಬಿ, ರಮೇಶ ಕದಮ, ಈರಪ್ಪ ದೇಯಣ್ಣವರ ಸೇರಿದಂತೆ ಸ್ಥಳೀಯರು, ಬೆಟಗೇರಿ ಗ್ರಾಮದ ಅಂಗಡಿ ಮುಂಗಟ್ಟುಗಳ ಮಾಲೀಕರು, ಗ್ರಾಪಂ ಸಿಬ್ಬಂದಿ, ಇತರರು ಇದ್ದರು.

# ಸಿಬ್ಬಂದಿ ನೇಮಕ ಮಾಡುವಂತೆ ಆಗ್ರಹಿಸಿ ಮನವಿ



ಗೋಕಾಕ: ತಾಲೂಕಿನ ಅಂಕಲಗಿ ಪಟ್ಟಣದಲ್ಲಿ ಸುಸಜ್ಜಿತ ಸಾರ್ವಜನಿಕ ಆರೋಗ್ಯ ಕೇಂದ್ರವಿದ್ದು ಸಿಬ್ಬಂಧಿಗಳಿಲ್ಲದೆ ತಾಲೂಕು ಕೇಂದ್ರಕ್ಕೆ ತೆರಳುವ ದುಸ್ಥಿತಿ ಎದುರಾಗಿದ್ದು ವೈದ್ಯ ಸಿಬ್ಬಂಧಿ ನೇಮಕ ಮಾಡುವಂತೆ ಆಗ್ರಹಿಸಿ ಆರೋಗ್ಯ ಇಲಾಖೆಯ ಉಪನಿರ್ದೇಶಕ ಡಾ. ರಾಧಾಕೃಷ್ಣ ಅವರಿಗೆ ಅಂಕಲಗಿ ಪಟ್ಟಣದ ಸಾರ್ವಜನಿಕರು ಮನವಿ ಸಲ್ಲಿಸಿದರು.

ಅಂಕಲಗಿ ಪಟ್ಟಣದ ಪ್ರಾಥಮಿಕ ಆರೋಗ್ಯ ಕೇಂದ್ರ ಅಂಕಲಗಿ ಆಸ್ಪತ್ರೆಗೆ ದಿನ ನಿತ್ಯ 200 ರಿಂದ 400 ಜನ ಆಸ್ಪತ್ರೆಗೆ ಚಿಕಿತ್ಸೆ ಸಲುವಾಗಿ ಬರುತ್ತಿದ್ದು, ಆದರೆ ಸದರಿ ಆಸ್ಪತ್ರೆಯಲ್ಲಿ ವೈದ್ಯರು ಇರುವುದಿಲ್ಲ, ಸಾರ್ವಜನಿಕರ ಹಿತದೃಷ್ಟಿಯಿಂದ ಸದರಿ ಆಸ್ಪತ್ರೆಗೆ ವೈದ್ಯರನ್ನು ಹಾಗೂ ಹೆಚ್ಚಿನ ಸಿಬ್ಬಂಧಿ ನಿಯೋಜಿಸುವಂತೆ ಮನವಿಯಲ್ಲಿ ತಿಳಿಸಿದ್ದಾರೆ.

ಈ ಸಂದರ್ಭದಲ್ಲಿ ತಾಲೂಕು ವೈದ್ಯಾಧಿಕಾರಿ ಡಾ.ಮುತ್ತಣ್ಣ ಕೊಪ್ಪದ, ಡಾ.ರವಿಂದ್ರ ಅಂಟಿನ, ಸುರೇಶ ಸನದಿ, ಜಯಾನಂದ ಹುಣಚ್ಯಾಳ, ಸಚೀನ ಕಮಟೇಕರ, ಅಂಕಲಗಿ ಪಟ್ಟಣ ಜನಪ್ರತಿನಿಧಿಗಳು, ಮುಖಂಡರು ಸೇರಿದಂತೆ ಅನೇಕರು ಇದ್ದರು.

## ಪೂಜ್ಯ ಶ್ರೀ ಕಲ್ಲಯ್ಯಜ್ಜನವರಿಗೆ ಎಸ್‌ಐಆರ್ ಎನ್ಯೂಮರೇಶನ ನಮೂನೆ ವಿತರಿಸಿದ ಡಿಸಿ ಶ್ರೀಧರ

# ಎಸ್‌ಐಆರ್ ಪ್ರಕ್ರಿಯೆಯಲ್ಲಿ ಪ್ರತಿಯೊಬ್ಬರೂ ಪಾಲ್ಗೊಳ್ಳಿ: ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ ಕರೆ

ಗದಗ: ವಿಶೇಷ ಸಂಕ್ಷಿಪ್ತ ಪರಿಷ್ಕರಣೆ (ಎಸ್‌ಐಆರ್) ಪ್ರಕ್ರಿಯೆಯಲ್ಲಿ ಜಿಲ್ಲೆಯ ಪ್ರತಿಯೊಬ್ಬ ಅರ್ಹ ಮತದಾರರು ಸಕ್ರಿಯವಾಗಿ ಪಾಲ್ಗೊಂಡು ಮತದಾರರ ಪಟ್ಟಿಯನ್ನು ನಿಖರ ಹಾಗೂ ದೋಷರಹಿತವಾಗಿಸುವ ಕಾರ್ಯಕ್ಕೆ ಸಹಕರಿಸಬೇಕು ಎಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ ಅವರು ಕರೆ ನೀಡಿದರು.

ನಗರದ ಪ್ರಖ್ಯಾತ ತ್ರಿವಿಧ ದಾಸೋಹ ಮಠವಾದ ವೀರೇಶ್ವರ ಪುಣ್ಯಾಶ್ರಮದಲ್ಲಿ ಮಂಗಳವಾರ (ಜೂನ್ 30) ರಂದು ಪೂಜ್ಯ ಶ್ರೀ ಕಲ್ಲಯ್ಯಜ್ಜನವರಿಗೆ ಎಸ್‌ಐಆರ್ ಎನ್ಯೂಮರೇಶನ್ ನಮೂನೆಯನ್ನು ವಿತರಿಸುವ ಮೂಲಕ ಬಿಎ??? ಅವರುಗಳು ಎಸ್‌ಐಆರ್ ನೊಂದಣಿ ಮನೆ ಮನೆ ಭೇಟಿಗೆ ಕಾರ್ಯಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಈ ಸಂದರ್ಭದಲ್ಲಿ ಎಸ್‌ಐಆರ್ (Special Intensive Revision) ಪ್ರಕ್ರಿಯೆಯ ಉದ್ದೇಶ, ಮಹತ್ವ ಹಾಗೂ ಅನುಸರಿಸಬೇಕಾದ ಕ್ರಮಗಳ ಕುರಿತು ಜಿಲ್ಲಾಧಿಕಾರಿಗಳು ವಿವರವಾಗಿ ಮಾಹಿತಿ ನೀಡಿದರು. ಮತದಾರರ ಪಟ್ಟಿಯಲ್ಲಿ ಹೆಸರುಗಳ ನಿಖರತೆ ಕಾಪಾಡುವುದು, ಅರ್ಹ ಮತದಾರರ ಹೆಸರು ಸೇರ್ಪಡೆ, ಅನರ್ಹ ಅಥವಾ ಪುನರಾವರ್ತಿತ ಹೆಸರುಗಳ ತಿದ್ದುಪಡಿ ಹಾಗೂ ಅಗತ್ಯ ದಾಖಲಾತಿಗಳನ್ನು ಸಲ್ಲಿಸುವುದು ಎಸ್‌ಐಆರ್ ಪ್ರಕ್ರಿಯೆಯ ಪ್ರಮುಖ ಉದ್ದೇಶವಾಗಿದೆ ಎಂದು ತಿಳಿಸಿದರು.

ಮತದಾರರ ಪಟ್ಟಿಯು ಪ್ರಜಾಪ್ರಭುತ್ವದ ಅಡಿಪಾಯವಾಗಿದ್ದು, ಪ್ರತಿಯೊಬ್ಬ ನಾಗರಿಕರು ತಮ್ಮ ಮಾಹಿತಿಯನ್ನು ಸರಿಯಾಗಿ ಪರಿಶೀಲಿಸಿ ಅಗತ್ಯವಿದ್ದಲ್ಲಿ ಎಸ್‌ಐಆರ್ ನಮೂನೆಗಳನ್ನು ಭರ್ತಿ ಮಾಡಿ ಸಂಬಂಧಿಸಿದ ಚುನಾವಣಾ ಅಧಿಕಾರಿಗಳಿಗೆ ಸಲ್ಲಿಸಬೇಕು. ಇದರಿಂದ ಪಾರದರ್ಶಕ ಹಾಗೂ ವಿಶ್ವಾಸಾರ್ಹ ಮತದಾರರ ಪಟ್ಟಿ ಸಿದ್ಧಗೊಳ್ಳಲು ಸಾಧ್ಯವಾಗುತ್ತದೆ ಎಂದು ಹೇಳಿದರು.

ಧಾರ್ಮಿಕ, ಸಾಮಾಜಿಕ ಹಾಗೂ ಸಾರ್ವಜನಿಕ ಸಂಸ್ಥೆಗಳ ಮುಖಂಡರು ಜನರಲ್ಲಿ ಎಸ್‌ಐಆರ್ ಕುರಿತು ಅರಿವು ಮೂಡಿಸುವ ಕಾರ್ಯದಲ್ಲಿ ಕೈಜೋಡಿಸಬೇಕು. ಸಾರ್ವಜನಿಕರು ಯಾವುದೇ ಗೊಂದಲಕ್ಕೆ ಒಳಗಾಗದೆ ಚುನಾವಣಾ ಆಯೋಗದ ನಿರ್ದೇಶನದಂತೆ ಪ್ರಕ್ರಿಯೆಯಲ್ಲಿ ಭಾಗವಹಿಸಿ ಪ್ರಜಾಪ್ರಭುತ್ವವನ್ನು ಮತ್ತಷ್ಟು ಬಲಪಡಿಸಬೇಕು ಎಂದು ಜಿಲ್ಲಾಧಿಕಾರಿಗಳು ಮನವಿ ಮಾಡಿದರು.

ಜೂನ್ 30 ರಿಂದ ಜುಲೈ 29 ರವರೆಗೆ ಬಿ.ಎಲ್.ಒ.ಗಳು ಮನೆ ಮನೆಗೆ ಭೇಟಿ ನೀಡಿ ಸಮೀಕ್ಷೆ ಹಾಗೂ ಪರಿಶೀಲನೆ ನಡೆಸಲಿದ್ದಾರೆ. ತದನಂತರ ಆಗಸ್ಟ್ 5 ರಂದು ಕರಡು ಮತದಾರರ ಪಟ್ಟಿಯನ್ನು ಪ್ರಕಟಿಸಲಾಗುವುದು. ಈ ಬಗ್ಗೆ ಸಾರ್ವಜನಿಕರಲ್ಲಿ ಹೆಚ್ಚಿನ ಜಾಗೃತಿ ಮೂಡಿಸುವ ನಿಟ್ಟಿನಲ್ಲಿ ಮಾಧ್ಯಮಗಳು ಸಹಕರಿಸಬೇಕು ಎಂದು ಜಿಲ್ಲಾಧಿಕಾರಿಗಳು ಕೋರಿದರು.

ಆಯೋಗದ ಮಾರ್ಗಸೂಚಿಯಂತೆ 2002ರ ಮತದಾರರ ಪಟ್ಟಿಯನ್ನು ಮಾನದಂಡವಾಗಿಟ್ಟುಕೊಂಡು, ಪ್ರಸ್ತುತ ಇರುವ 2025ರ ಮತದಾರರ ಪಟ್ಟಿಯೊಂದಿಗೆ ಹೋಲಿಕೆ ಹಾಗೂ ಮ್ಯಾಪಿಂಗ್ ಪ್ರಕ್ರಿಯೆ ನಡೆಸಲಾಗಿದೆ. ಬೂತ್ ಮಟ್ಟದ ಅಧಿಕಾರಿಗಳು (ಬಿಎಲ್‌ಒ) ಮನೆ ಮನೆಗೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದು, ಜಿಲ್ಲೆಯಲ್ಲಿ ಈಗಾಗಲೇ ಶೇ 94ಕ್ಕೂ ಅಧಿಕ ನೈಜ ಮತದಾರರನ್ನು ಗುರುತಿಸಿ, ಕುಟುಂಬಗಳ ಲಿಂಕೇಜ್‌ನೊಂದಿಗೆ ಹೊಂದಾಣಿಕೆ ಮಾಡಲಾಗಿದೆ ಎಂದರು.

ಅಕ್ಟೋಬರ್ 7 ರಂದು ಅಂತಿಮ ಮತಪಟ್ಟಿ ಪ್ರಕಟ:

ಮನೆ ಗಣತಿ ತರುವಾಯ ಆಗಸ್ಟ್ 5 ರಂದು ಕರಡು ಮತದಾರರ ಪಟ್ಟಿಯನ್ನು ಅಧಿಕೃತವಾಗಿ ಪ್ರಕಟಿಸಲಾಗುವುದು. ಮತದಾರ ಪಟ್ಟಿಗೆ ಆಕ್ಷೇಪಣೆಗಳ ಸಲ್ಲಿಕೆಗೆ ಎರಡು ತಿಂಗಳ ಕಾಲಾವಕಾಶ ನೀಡಲಾಗಿದೆ. ಸಾರ್ವಜನಿಕರು ಅಕ್ಟೋಬರ್ 3 ಒಳಗಾಗಿ ಆಕ್ಷೇಪಣೆಗಳನ್ನು ಸಲ್ಲಿಸಬಹುದು. ಸಾರ್ವಜನಿಕರಿಂದ ಬರುವ ಆಕ್ಷೇಪಣೆಗಳ ಇತ್ಯರ್ಥದ ನಂತರ, ಅಕ್ಟೋಬರ್ 7 ರಂದು ಅಂತಿಮ ಮತದಾರರ ಪಟ್ಟಿಯನ್ನು ಅಧಿಕೃತವಾಗಿ ಪ್ರಕಟಿಸಲಾಗುವುದು. ನಂತರ ಈಗ ಜಾರಿಯಲ್ಲಿರುವ ಎಲ್ಲಾ ಮತದಾರರ ಪಟ್ಟಿಗಳು ಸಂಪೂರ್ಣವಾಗಿ ರದ್ದಾಗಲಿದ್ದು ಪರಿಷ್ಕೃತ ಮತದಾರರ ಪಟ್ಟಿ ಮಾತ್ರ ಊರ್ಜಿತವಾಗುತ್ತದೆ. ಎಂದರು.

ಅಗತ್ಯ ದಾಖಲೆ ಪಡೆದು ಮತಪಟ್ಟಿಗೆ ಸೇರ್ಪಡೆ:

ಕುಟುಂಬದ ಮುಖ್ಯಸ್ಥರ ಹೆಸರು 2002ರ ಮತದಾರರ ಪಟ್ಟಿಯಲ್ಲಿದ್ದರೆ, ಹೊಸದಾಗಿ ಅರ್ಹತೆ ಪಡೆಯುವ ಕುಟುಂಬದ ಇತರೆ ಸದಸ್ಯರ ಹೆಸರನ್ನು ಸೇರ್ಪಡೆ ಮಾಡುವುದು ಸುಲಭವಾಗುತ್ತದೆ. ಮದುವೆಯಾಗಿ ಅಥವಾ ವಲಸೆ ಬಂದು ಇಲ್ಲಿ ನೆಲೆಸಿರುವವರ ಹೆಸರು ಹಳೆಯ ವೋಟರ್ ಲಿಸ್ಟ್‌ನಲ್ಲಿ ಇಲ್ಲದಿದ್ದರೆ, ಅವರಿಗೆ ಫ್ಯಾಮಿಲಿ ಲಿಂಕೇಜ್ ಸಿಗುವುದಿಲ್ಲ. ಈ ಹಿಂದೆ ಅವರು ವಾಸವಾಗಿದ್ದ ಸ್ಥಳದಲ್ಲಿನ ಮತದಾರರ ಪಟ್ಟಿಯಲ್ಲಿ ಅವರ ಹೆಸರು ಇದ್ದರೆ, ಆ ಮಾಹಿತಿ ಅನುಸಾರ ಹೆಸರು ಸೇರ್ಪಡೆ ಮಾಡಬಹುದು. ಮ್ಯಾಪಿಂಗ್ ಆಗದೆ ಇರುವವರು ಮನೆ ಗಣತಿ ಫಾರಂ ಜೊತೆ ಚುನಾವಣಾ ಆಯೋಗ ನಿಗದಿಪಡಿಸಿದ ಕೇಂದ್ರ ಅಥವಾ ರಾಜ್ಯ ಸರ್ಕಾರ, ಸಾರ್ವಜಿಕ ಉದ್ಯಮಗಳು ನಿಯಮಿತ ಉದ್ಯೋಗಿ ಗುರುತಿನ ಚೀಟಿ, ಪಿಂಚಣಿ ಆದೇಶ ಅಥವಾ ಗುರುತಿನ ಚೀಟಿ, 1 ಜುಲೈ 1987ಕ್ಕಿಂತ ಮೊದಲು ಭಾರತದಲ್ಲಿ ಸರ್ಕಾರಿ, ಸ್ಥಳೀಯ ಪ್ರಾಧಿಕಾರ, ಬ್ಯಾಂಕ್,ಅಂಚೆಕಚೇರಿ, ಎಲ್.ಐ.ಸಿ ಉದ್ಯಮಗಳಿಂದ ನೀಡಲಾದ ಯಾವುದೇ ಗುರುತಿನ ಚೀಟಿ, ಪ್ರಮಾಣ ಪತ್ರ ಅಥವಾ ದಾಖಲೆ, ಜನನ ಪ್ರಮಾಣ ಪತ್ರ, ಪಾಸ್‌ಪೋರ್ಟ್, ಮೆಟ್ರಿಕ್ಯೂಲೇಶನ್ (ಎಸ್.ಎಸ್.ಎಲ್.ಸಿ) ಶೈಕ್ಷಣಿಕ ಪ್ರಮಾಣ ಪತ್ರ, ಶಾಶ್ವತ ನಿವಾಸ ಪ್ರಮಾಣ ಪತ್ರ, ಅರಣ್ಯ ಹಕ್ಕು ಪ್ರಮಾಣ ಪತ್ರ, ಜಾತಿ ಪ್ರಮಾಣ ಪತ್ರ, ರಾಷ್ಟ್ರೀಯ ನಾಗರಿಕರ ನೋಂದಣಿ, ಕುಟುಂಬ ನೊಂದಣಿ, ಭೂಮಿ ಮನೆ ಹಂಚಿಕೆ ಪ್ರಮಾಣ ಪತ್ರ ಸಲ್ಲಿಸಬಹುದು. ಇದರೊಂದಿಗೆ ಆಧಾರ್ ಕಾರ್ಡನ್ನು ಗುರುತಿನ ಪುರಾವೆಯಾಗಿ ಮಾತ್ರ ನೀಡಬಹುದು. ಇವುಗಳನ್ನು ಪಡೆದು ಮತಪಟ್ಟಿಗೆ ಸೇರಿಸಲು ಕ್ರಮ ವಹಿಸಲಾಗುವುದು ಎಂದರು.

ಈ ವೇಳೆ ಉಪವಿಭಾಗಾಧಿಕಾರಿ ಗಂಗಪ್ಪ ಎಂ, ತಹಶಿಲ್ದಾರರ ಶ್ರೀನಿವಾಸ್ ಮೂರ್ತಿ, ಜಿಲ್ಲಾ ವಾರ್ತಾಧಿಕಾರಿ ವಸಂತ ಮಡ್ಲೂರ ಸೇರಿದಂತೆ ಇತರರು ಇದ್ದರು.



ಚುನಾವಣಾ ಆಯೋಗದ ಈ ಮಹತ್ವದ ಕಾರ್ಯಕ್ಕೆ ಸಾರ್ವಜನಿಕರು ಸಂಪೂರ್ಣ ಸಹಕಾರ ನೀಡಬೇಕು. ಸಮಾಜದ ಎಲ್ಲ ವರ್ಗದ ಜನರು ತಮ್ಮ ಮತದಾರರ ಮಾಹಿತಿಯನ್ನು ಪರಿಶೀಲಿಸಿ ಅಗತ್ಯ ಕ್ರಮ ಕೈಗೊಳ್ಳುವ ಮೂಲಕ ಜವಾಬ್ದಾರಿಯುತ ನಾಗರಿಕರಾಗಿ ಕರ್ತವ್ಯ ನಿರ್ವಹಿಸಬೇಕು.

**– ಪೂಜ್ಯ ಶ್ರೀ ಕಲ್ಲಯ್ಯಜ್ಜನವರು, ವಿರೇಶ್ವರ ಪುಣ್ಯಾಶ್ರಮ, ಗದಗ**

# ಗಣ್ಯರಿಗೆ ಎಸ್‌ಐಆರ್ ಎನ್ಯೂಮರೇಶನ್ ನಮೂನೆ ವಿತರಣೆ: ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರರಿಂದ ಅಭಿಯಾನಕ್ಕೆ ಚಾಲನೆ



ಗದಗ: ವಿಶೇಷ ತೀವ್ರ ಪರಿಷ್ಕರಣೆ (ಎಸ್‌ಐಆರ್) ಎನ್ಯೂಮರೇಶನ್ ಪ್ರಕ್ರಿಯೆಯಲ್ಲಿ ಸಾರ್ವಜನಿಕರ ಸಕ್ರಿಯ ಭಾಗವಹಿಸುವಿಕೆಗೆ ಉತ್ತೇಜನ ನೀಡುವ ಉದ್ದೇಶದಿಂದ ಗದಗ ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ ಅವರು ಮಂಗಳವಾರ ವಿವಿಧ ಕ್ಷೇತ್ರಗಳ ಗಣ್ಯರಿಗೆ ಎಸ್‌ಐಆರ್ ಎನ್ಯೂಮರೇಶನ್ ನಮೂನೆಗಳನ್ನು ವಿತರಿಸುವ ಮೂಲಕ ಅಭಿಯಾನಕ್ಕೆ ಚಾಲನೆ ನೀಡಿದರು.

ಈ ಸಂದರ್ಭದಲ್ಲಿ ಶಿವಾನಂದ ಮಠದ ಪೂಜ್ಯ ಶಿವಾನಂದ ಶ್ರೀಗಳು, ಅಂತಾರಾಷ್ಟ್ರೀಯ ಕುಸ್ತಿಪಟು ಕು. ಪ್ರೇಮಾ ಹುಚ್ಚಣ್ಣನವರ ಹಾಗೂ ಪ್ರಮುಕರಾದ ಅಬುಬಕರ ಕಟ್ಟೀಮನಿ ಅವರಿಗೆ ಎಸ್‌ಐಆರ್ ಎನ್ಯೂಮರೇಶನ್ ನಮೂನೆಗಳನ್ನು ಜಿಲ್ಲಾಧಿಕಾರಿಗಳು ವಿತರಿಸಿದರು.

ಬಳಿಕ ಮಾತನಾಡಿದ ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ ಅವರು, ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ ಪ್ರಕ್ರಿಯೆ ಯಶಸ್ವಿಯಾಗಲು ಸಾರ್ವಜನಿಕರ ಸಹಕಾರ ಅತ್ಯಂತ ಅಗತ್ಯವಾಗಿದೆ. ಪ್ರತಿಯೊಬ್ಬ ಅರ್ಹ ಮತದಾರರು ಎಸ್‌ಐಆರ್ ಎನ್ಯೂಮರೇಶನ್ ನಮೂನೆಯನ್ನು ಸರಿಯಾಗಿ ಭರ್ತಿ ಮಾಡಿ, ಅಗತ್ಯ ದಾಖಲೆಗಳೊಂದಿಗೆ ನಿಗದಿತ ಅವಧಿಯೊಳಗೆ ಸಲ್ಲಿಸುವ ಮೂಲಕ ಚುನಾವಣಾ ಪ್ರಕ್ರಿಯೆಯನ್ನು ಇನ್ನಷ್ಟು ಪಾರದರ್ಶಕ ಹಾಗೂ ಸಮರ್ಪಕವಾಗಿಸಲು ಕೈಜೋಡಿಸಬೇಕು ಎಂದು ಕರೆ ನೀಡಿದರು.

ಸಮಾಜದ ವಿವಿಧ ಕ್ಷೇತ್ರಗಳ ಗಣ್ಯರು ಈ ಅಭಿಯಾನದಲ್ಲಿ ಭಾಗವಹಿಸುವುದರಿಂದ ಸಾರ್ವಜನಿಕರಲ್ಲಿ ಜಾಗೃತಿ ಹೆಚ್ಚಲಿದ್ದು, ಹೆಚ್ಚಿನ ಸಂಖ್ಯೆಯಲ್ಲಿ ನಾಗರಿಕರು ಎಸ್‌ಐಆರ್ ಪ್ರಕ್ರಿಯೆಯಲ್ಲಿ ಪಾಲ್ಗೊಳ್ಳುವ ವಿಶ್ವಾಸವಿದೆ ಎಂದು ಅವರು ತಿಳಿಸಿದರು.

ಜೂನ್ 30 ರಿಂದ ಜುಲೈ 29 ರವರೆಗೆ ಬಿ.ಎಲ್.ಒ.ಗಳು ಮನೆ ಮನೆಗೆ ಭೇಟಿ ನೀಡಿ ಸಮೀಕ್ಷೆ ಹಾಗೂ ಪರಿಶೀಲನೆ ನಡೆಸಲಿದ್ದಾರೆ. ತದನಂತರ ಆಗಸ್ಟ್ 5 ರಂದು ಕರಡು ಮತದಾರರ ಪಟ್ಟಿಯನ್ನು ಪ್ರಕಟಿಸಲಾಗುವುದು. ಆಯೋಗದ ಮಾರ್ಗಸೂಚಿಯಂತೆ 2002ರ ಮತದಾರರ ಪಟ್ಟಿಯನ್ನು ಮಾನದಂಡವಾಗಿಟ್ಟುಕೊಂಡು, ಪ್ರಸ್ತುತ ಇರುವ 2025ರ ಮತದಾರರ ಪಟ್ಟಿಯೊಂದಿಗೆ ಹೋಲಿಕೆ ಹಾಗೂ ಮ್ಯಾಪಿಂಗ್ ಪ್ರಕ್ರಿಯೆ ನಡೆಸಲಾಗಿದೆ ಎಂದರು.

ಈ ವೇಳೆ ಉಪವಿಭಾಗಾಧಿಕಾರಿ ಗಂಗಪ್ಪ ಎಂ, ತಹಶಿಲ್ದಾರರ ಶ್ರೀನಿವಾಸ್ ಮೂರ್ತಿ, ಜಿಲ್ಲಾ ವಾರ್ತಾಧಿಕಾರಿ ವಸಂತ ಮಡ್ಲೂರ ಸೇರಿದಂತೆ ಇತರರು ಇದ್ದರು.



# ಉ.ಕ. ದಲ್ಲಿ ಹೆಚ್ಚು ಸಿನಿಮಾಗಳು ತಯಾರಾಗಲಿ



ಹುಬ್ಬಳ್ಳಿ :ಉತ್ತರ ಕರ್ನಾಟಕದಲ್ಲಿ ಹೆಚ್ಚು ಸಿನಿಮಾಗಳು ತಯಾರಾಗಲಿ. ಇಲ್ಲಿನ ಕಲಾವಿದರಿಗೆ ಹೆಚ್ಚಿನ ಅವಕಾಶಗಳು ದೊರೆಯಲಿ ಎಂದು ಸ್ವರ್ಣ ಗ್ರೂಪ್ ಆಫ್ ಕಂಪನಿ ಚೇರ್ಮನ್ ಎಚ್‌ಎಸ್ ವಿ ಎಸ್ ವಿ ಪ್ರಸಾದ್ ಹೇಳಿದರು. ಅವರು ಹುಬ್ಬಳ್ಳಿ ಸಿದ್ದಾರೂಢ ಮಠದಲ್ಲಿ ನಡೆದ ವಿಸ್ಮಯ ವೆಂಚರ್ಸ್ ನಿರ್ಮಾಣದ "ಏನಾಯಿತು" ಸಿನಿಮಾಗೆ ಕ್ಯಾಮೆರಾ ಚಾಲನೆ ನೀಡಿ ಮಾತನಾಡಿದರು.

ಉತ್ತರ ಕರ್ನಾಟಕದಲ್ಲಿ ಹಲವು ಕಲಾವಿದರು ತಂತ್ರಜ್ಞರು ಇದ್ದಾರೆ ಇವರಿಗೆಲ್ಲ ಇನ್ನಷ್ಟು ಅವಕಾಶ ಸಿಗಬೇಕಾಗಿದೆ ಆ ನಿಟ್ಟಿನಲ್ಲಿ ಈ ಭಾಗದಲ್ಲಿ ಸಿನಿಮಾ ಕೆಲಸಗಳು ಹೆಚ್ಚು ನಡೆಯಬೇಕಿದೆ ಎಂದರು. ಯುವ ಜನಾಂಗವನ್ನು ಉತ್ತಮ ದಾರಿಗೆ ಕೊಂಡೊಯ್ಯುವ ಮಾರ್ಗದರ್ಶಿ ಸಿನಿಮಾಗಳು ಇಂದು ಮೂಡಿ ಬರಬೇಕಿದೆ. ಇಂತಹ ಸಿನಿಮಾಕೆ ಇಂದು ಚಾಲನೆ ಸಿಕ್ಕಿದ್ದು ಇದೊಂದು ಉತ್ತಮ ಬೆಳವಣಿಗೆ ಎಂದು ಹರ್ಷ ವ್ಯಕ್ತಪಡಿಸಿದರು.

ಸಿನಿಮಾಕ್ಕೆ ಕ್ಲಾಪ್ ಮಾಡಿದ ಸಿದ್ಧಾರೂಢ ಮಠ ಟ್ರಸ್ಟ್ ಚೇರ್ಮನ್ ಬಾಳು ಮಗಜಿಕೊಂಡಿ ಮಾತನಾಡಿ, ಇಡೀ ಕುಟುಂಬದವರು ಕುಳಿತು ನೋಡುವ ಹಾಗೂ ಸಮಾಜಕ್ಕೆ ಉತ್ತಮ ಸಂದೇಶ ನೀಡುವ ಚಲನಚಿತ್ರಗಳು ಹೊರಬರಲಿ ಎಂದು ಹೇಳಿದರು. ಮುಖ್ಯ ಅತಿಥಿಗಳಾಗಿ ಎವಿಕೆ ಫೌಂಡೇಶನ್ ವೆಂಕಟೇಶ್ ಕಾಟವೆ, ಹಿರಿಯ ಕವಿ ಮಹಾಂತಪ್ಪ ನಂದೂರ್, ಡಾ. ರಾಮು ಮುಲಗಿ ಹಾಗೂ ನಾಯಕ ನಟ ಇಶಾನ್, ನಟಿ ಚೈತ್ರ ತೋಟದ್,ನಿರ್ದೇಶಕ ತಮನ್ನಾ, ಡಾ.ಪ್ರಭು ಗಂಜಿಹಾಳ, ಡಾ.ವೀರೇಶ, ವಿನಾಯಕ ಶೆಟ್ಟಿ, ನವೀನ ಪಾಟೀಲ ಜೈನ್, ರಾಘು ಬುಧಪನವರ್, ಕೃಷ್ಣ ಉಲ್ಲಿಕಾಶಿ ಚಿತ್ರ ತಂಡದವರು ಪಾಲ್ಗೊಂಡಿದ್ದರು.

# ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಮತದಾನಕ್ಕೆ ಬಹಳ ಮಹತ್ವವಿದೆ



ನವಲಗುಂದ: ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಮತದಾನಕ್ಕೆ ಬಹಳ ಮಹತ್ವವಿದೆ. ಇಡೀ ರಾಜ್ಯದಾದ್ಯಂತ ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ ಕಾರ್ಯ ನಡೆಯುತ್ತಿದ್ದು, ನಾಗರಿಕರು ನಿಮ್ಮ ಮತದಾನವನ್ನು ಭದ್ರಪಡಿಸಿಕೊಳ್ಳಬೇಕು' ಎಂದು ಸಹಾಯಕ ಮತದಾರ ನೋಂದಣಾಧಿಕಾರಿ ಹಾಗೂ ಹುಬ್ಬಳ್ಳಿ ಧಾರವಾಡ ನಗರಾಭಿರುದ್ದಿ ಪ್ರಾಧಿಕಾರ ಆಯುಕ್ತರಾದ ದೇವರಾಜ ಹೇಳಿದರು.

ವಿವಿಧ ಇಲಾಖೆಗಳ ಹಾಗೂ ಶಾಲಾ ವಿದ್ಯಾರ್ಥಿಗಳಿಂದ ಆಯೋಜಿಸಿದ್ದ ಮತದಾರರ ಪಟ್ಟಿ ಪರಿಷ್ಕರಣೆ (ಎಸ್‌ಐಆರ್) ಕುರಿತು ಜಾಗೃತಿ ಜಾಥಾಗೆ ಚಾಲನೆ ನೀಡಿ ಮಾತನಾಡಿದರು.

ಮತದಾರರ ಮ್ಯಾಪಿಂಗ್ ಕಾರ್ಯವನ್ನು ಬಿಎಲ್‌ಒಗಳು ನಿರಂತರವಾಗಿ ಮಾಡುತ್ತಿದ್ದಾರೆ. ಎಸ್‌ಐಆರ್ ಯಶಸ್ವಿಯಾದರೆ ಪ್ರಕ್ರಿಯೆಯಲ್ಲಿ ಪಾರದರ್ಶಕತೆ ಹೆಚ್ಚಾಗಲಿದೆ. ಒಬ್ಬ ಮತದಾರರ ಹೆಸರು ಮೂರು ನಾಲ್ಕು ಕಡೆ ದಾಖಲಿಸುವುದು ಕಾನೂನು ಬಾಹಿರವಾಗಲಿದೆ ಎಂದು ತಿಳಿಸಿದರು.

ತಹಶೀಲ್ದಾರ ಸುಧೀರ್ ಸಾಹುಕಾರ ಮಾತನಾಡಿ ಮತಗಟ್ಟೆ ಅಧಿಕಾರಿಗಳು ಜೂನ್ 30 ರಿಂದ ಜುಲೈ 29 ರವರಗೆ ಮತದಾರರ ಮನೆ ಮನೆಗೆ ಬಂದು ಮತದಾರರ ನೋಂದಣಿಯ ನಮೂನೆಯ 2 ಪ್ರತಿಗಳನ್ನು ಸಲ್ಲಿಸುತ್ತಿದ್ದು, ಸದರಿ ನಮೂನೆಗಳಲ್ಲಿ ತಮಗೆ ಸಂಬಂಧಿಸಿದ ನಿಖರ ಮಾಹಿತಿಯನ್ನು ಸರಿಯಾಗಿ ಭರ್ತಿ ಮಾಡಿ ಒಂದು ಪ್ರತಿಯನ್ನು ಮತಗಟ್ಟೆ ಅಧಿಕಾರಿಗಳಿಗೆ ಕೊಡಲು ಹಾಗೂ ಒಂದು ಪ್ರತಿಯನ್ನು ತಮ್ಮೊಂದಿಗೆ ಇಟ್ಟುಕೊಳ್ಳಲು ಹಾಗೂ ಸದರಿ ಮತದಾರರ ಪಟ್ಟಿಯ ಕರಡು ಪ್ರತಿಯನ್ನು ಪ್ರಚುರಪಡಿಸಿದ ನಂತರ ಅದನ್ನು ವೀಕ್ಷಿಸಿ ಏನಾದರೂ ನ್ಯೂನ್ಯತೆಗಳು ಕಂಡು ಬಂದಲ್ಲಿ ಮನವಿಯ ಮೂಲಕ ಸರಿಪಡಿಸಿಕೊಳ್ಳಬೇಕು ಎಂದು ತಿಳಿಸಿದರು.

ಮುಖ್ಯಾಧಿಕಾರಿ ಎಸ್ ಪಿ ಪೂಜಾರ, ಸಿಪಿಐ ರವಿಕುಮಾರ ಕಪ್ಪತ್ತನವರ ಮಾತನಾಡಿದರು. ನಂತರ ಪಟ್ಟಣದ ಪ್ರಮುಖ ಬೀದಿಗಳಲ್ಲಿ ಜಾಥಾಸಾಗಿ ಮಾಡಲ್ ಹೈಸ್ಕೂಲ್ ಆವರಣದಲ್ಲಿ ಮುಕ್ತಾಯಗೊಂಡಿತು.

ಜಗದೀಶ್ ಹಡಪದ, ಸಾಗರ ಶಿರಬಡಗಿ,ಗಾಯತ್ರಿದೇವಿ ಪಾಟೀಲ್, ಪಿಎಸ್‌ಐ ಜನಾರ್ಧನ ಭಟ್ರಳ್ಳಿ, ಎಸ್ ಎಸ್ ಹಿರೇಗೌಡ್ರ, ಎನ್ ವಿ ಕುರವತ್ತಿಮಠ, ಅಜಯ ಆಯಿ, ಅಕ್ಕಮಹಾದೇವಿ ಬಣಗಾರ, ರವಿ ವಿಶ್ವಜ್ಞ, ದಾವಲಸಾಬ ಮಸೂತಿ, ಪಪ್ಪು ಜೈನ, ವಿಜಯ ಕುಲಕರ್ಣಿ ಸೇರಿ ವಿವಿಧ ಇಲಾಖೆಗಳ ಅಧಿಕಾರಿಗಳು, ಶಿಕ್ಷಕರು ವಿದ್ಯಾರ್ಥಿಗಳು ಜಾಥಾದಲ್ಲಿ ಪಾಲ್ಗೊಂಡಿದ್ದರು.

# ಪಲ್ಸ್ ಪೋಲಿಯೋ ದಿನಾಚರಣೆ



ಮುನವಳ್ಳಿ: ಪಟ್ಟಣದ ಆರೋಗ್ಯ ಕೇಂದ್ರದಲ್ಲಿ ಪಲ್ಸ್ ಪೋಲಿಯೋ ದಿನಾಚರಣೆ ಅಂಗವಾಗಿ ಸೋಮಶೇಖರ ಮಠದ ಶ್ರೀ ಮುರುಘೇಂದ್ರ ಶ್ರೀಗಳ ಸಾನಿಧ್ಯದಲ್ಲಿ ಪುರಸಭೆ ಅಧ್ಯಕ್ಷ ಈಶ್ವರ ಕರಿಕಟ್ಟಿ 5 ವರ್ಷದ ಒಳಗಿನ ಮಕ್ಕಳಿಗೆ ಪೋಲಿಯೋ ಲಸಿಕೆ ಹಾಕುವ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು.

ಡಾ॥ ದಂಡಗಿ, ವೈದ್ಯಾಧಿಕಾರಿಗಳು ಹಾಗೂ ಆಶಾ ಕಾರ್ಯಕರ್ತೆಯರು, ಮಕ್ಕಳು ಉಪಸ್ಥಿತರಿದ್ದರು.

# ರಾಷ್ಟ್ರೀಯ ಪಲ್ಸ್ ಪೋಲಿಯೋ ಕಾರ್ಯಕ್ರಮ



ಲಕ್ಷೇಶ್ವರ: ಪಟ್ಟಣದ ಸಮುದಾಯ ಆರೋಗ್ಯ ಕೇಂದ್ರದಲ್ಲಿ ರಾಷ್ಟ್ರೀಯ ಪಲ್ಸ್ ಪೋಲಿಯೋ ಲಸಿಕಾ ಕಾರ್ಯಕ್ರಮ ಜರುಗಿತು.

ಮಕ್ಕಳಿಗೆ ಪಲ್ಸ್ ಪೋಲಿಯೋ ಹನಿ ನೀಡಿ ಮಾತನಾಡಿದ ವೈದ್ಯಾಧಿಕಾರಿ ಶ್ರೀಕಾಂತ ಕಾಟೆ ವಾಲಿ ಮತ್ತು ಗಂಗಾಧರ ಮೆಣಸಿನಕಾಯಿಯವರು ದೇಶವನ್ನು ಪೋಲಿಯೋ ಮುಕ್ತ ಮಾಡುವ ನಿಟ್ಟಿನಲ್ಲಿ ಕೇಂದ್ರ ಮತ್ತು ರಾಜ್ಯ ಸರ್ಕಾರಗಳು 5 ವರ್ಷದ ಒಳಗಿನ ಎಲ್ಲಾ ಮಕ್ಕಳಿಗೂ ಎರಡು ಹನಿ ಪಲ್ಸ್ ಪೋಲಿಯೋ ಹಾಕಲಾಗುತ್ತಿದೆ.

ಈ ಹನಿ ಹಾಕುವ ಮೂಲಕ ಮಕ್ಕಳಲ್ಲಿ ಉಂಟಾಗುವ ಅಂಗವಿಕಲತೆಯನ್ನು ತಡೆದು ಸದೃಢವಾಗಿ ಬೆಳೆಯಲು ಎಲ್ಲಾ ಐದು ವರ್ಷದ ಮಕ್ಕಳಿಗೆ ಹಾಕಲಾಗುತ್ತಿದೆ ಪ್ರತಿ ಬೂತ್ ಮಟ್ಟದಲ್ಲೂ ಆಶಾ ಕಾರ್ಯಕರ್ತೆಯರು ಅಂಗನವಾಡಿ ಕಾರ್ಯಕರ್ತೆಯರು ಮನೆಮನೆಗೆ ಭೇಟಿ ನೀಡಿ ಪಲ್ಸ್ ಪೋಲಿಯೋ ಹಾಕುತ್ತಿದ್ದು ಎಲ್ಲಾ ತಾಯಂದಿರು ಅವಶ್ಯವಾಗಿ ಈ ಕಾರ್ಯದಲ್ಲಿ ಭಾಗಿಯಾಗಬೇಕು ಎಂದು ಹೇಳಿದರು.

ಈ ಸಂದರ್ಭದಲ್ಲಿ ಬಸವರಾಜ್ ಚಕ್ರಸಾಲಿ ರಮೇಶ ಹಾಳದೋಟದ ಸಂಗಮೇಶ್ ಬೆಳವಲಕೊಪ್ಪ ಉಳಿಬಿಸಿ ಗೌಡ ಪಾಟೀಲ ವಿರೇಶ ಸಾಸಲವಾಡ ಗಿರೀಶ ಚೌರೆಡ್ಡಿ ಮಂಜುನಾಥ್ ಬಸಾಪುರ ಬಸವರಾಜ ಮಡಿವಾಳ ದುಂಡೇಶ ಕೊಟ್ಟಗಿ ಸೇರಿದಂತೆ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಆಸ್ಪತ್ರೆ ಸಿಬ್ಬಂದಿಗಳಾದ ರವಿಕುಮಾರ್ ಕೋರಿ ಮತ್ತು ವೈದ್ಯರು ಇದ್ದರು.

BELAGAVI VARTE Kannada Daily morning news paper Editor, Printer, Publisher and Owned by MAHESHWARI BHIMASHI BHARAMANNAVAR, 221/1A/1A/1A MAHALINGESHWAR NAGAR, NEAR BCA HOSTEL BELAGAVI KARNATAKA 591307. Printed at RAJADHANI PRINTING PRESS, CTS NO.1720/B1, SHOP NO.2 KELKARBAG, BELAGAVI, KARNATAKA - 590001